ಕರ್ನಾಟಕ ರಾಜ್ಯ
ಸಹಕಾರ ಪತ್ತಿನ ಸಂಘಗಳ
ಮಹಾಮಂಡಳದ ಪ್ರಕಟಣೆ

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಕನ್ನಡ ಮಾಸಪತ್ರಿಕೆ

# ಸಹಕಾರ

ಮಾಸಪತ್ರಿಕೆ

ಸಂಪುಟ : 7 । ಸಂಚಿಕೆ : 1 । ಜನವರಿ-2025 । ಪುಟಗಳು : 20 । ಬೆಲೆ : 25/-

ಬಾ ಇಲ್ಲಿ ಸಂಭವಿಸು ಇಂದೆನ್ನ ಹೃದಯದಲಿ
ನಿತ್ಯವೂ ಅವತರಿಪ ಸತ್ಯಾವತಾರಾ..
ಮಣ್ಣಾಗಿ ಮರವಾಗಿ ಮಿಗವಾಗಿ ಖಗವಾಗಿ
ಭವ ಭವದಿ ಭವಿಸಿಹೇ ಭವ ವಿದೂರಾ
ನಿತ್ಯವೂ ಅವತರಿಪ ಸತ್ಯಾವತಾರ
-ಕುವೆಂಪು

ನೂತನ ವರ್ಷ 2025ರ
ಜನವರಿ 14 ಮಕರ ಸಂಕ್ರಾಂತಿ,
ಹಾಗೂ ಜನವರಿ 26 ಗಣರಾಜ್ಯೋತ್ಸವದ
ಹಾರ್ದಿಕ ಶುಭಾಶಯಗಳು



ಸಡಗರ
ಸಂಭ್ರಮದ
ಸಂಕ್ರಾಂತಿ



ಭಾರತದ 76ನೇ
ಗಣರಾಜ್ಯೋತ್ಸವ

# ಭಾರತದ ಆರ್ಥಿಕ ಉದಾರೀಕರಣ, ಖಾಸಗೀಕರಣದ ಹರಿಕಾರ

# ಆರ್ಥಿಕ ತಜ್ಞ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ದೈವಾಧೀನ



**ದೆಹಲಿ :** ಭಾರತದ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ (92) ಅವರು ಡಿಸೆಂಬರ್ 26ರ ರಾತ್ರಿ 10 ಗಂಟೆ ಸುಮಾರಿಗೆ ನಿಧನರಾದರು. ತೀವ್ರ ಉಸಿರಾಟ ಸಮಸ್ಯೆಯಿಂದ ಬಳಲುತ್ತಿದ್ದ ಸಿಂಗ್ ಅವರನ್ನು ದೆಹಲಿಯ ಏಮ್ಸ್‌ನಲ್ಲಿ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೇ ಕೊನೆಯುಸಿರೆಳೆದರು. ಡಾ. ಸಿಂಗ್ ಅವರ ಅಂತ್ಯ ಸಂಸ್ಕಾರ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಿತು. ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ನರೇಂದ್ರ ಮೋದಿ, ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೇಂದ್ರ ಸಚಿವರು, ಸಂಸದರು, ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು, ಸಚಿವರುಗಳು, ವಿದೇಶಿ ಗಣ್ಯರು ಸೇರಿದಂತೆ ಕುಟುಂಬದ ಬಂಧು ಮಿತ್ರರು ಮೃತರ ಅಂತಿಮ ದರ್ಶನ ಪಡೆದರು. ಏಳು ದಿನಗಳ ಕಾಲ ರಾಷ್ಟ್ರೀಯ ಶೋಕಾಚರಣೆ ಘೋಷಿಸಲಾಗಿದೆ.

ಪಿ.ವಿ. ನರಸಿಂಹರಾವ್ ನೇತೃತ್ವದ ಕಾಂಗ್ರೇಸ್ ಸರಕಾರದಲ್ಲಿ ಡಾ. ಮನಮೋಹನ್ ಸಿಂಗ್ ಅವರು ಹಣಕಾಸು ಸಚಿವರಾಗಿದ್ದರು. ನಂತರ, 2004ರಿಂದ 2014ರವರೆಗೆ ಪ್ರಧಾನಿಯಾಗಿದ್ದರು. ಆರು ಅವಧಿಗೆ ರಾಜ್ಯಸಭಾ ಸದಸ್ಯರಾಗಿ ಸೇವೆ ಸಲ್ಲಿಸಿದ್ದ ಸಿಂಗ್ ಅವರು, ಒಮ್ಮೆಯೂ ಲೋಕಸಭೆ ಸದಸರಾಗಿ ಆಯ್ಕೆಯಾಗಲಿಲ್ಲ. 1999ರಲ್ಲಿ ದಕ್ಷಿಣ ದೆಹಲಿ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿದಿದ್ದ ಅವರು, ಬಿಜೆಪಿಯ ವಿಜಯಕುಮಾರ್ ಮಲ್ಹೋತ್ರ ವಿರುದ್ಧ ಪರಾಭವಗೊಂಡಿದ್ದರು. ಅಸ್ಸಾಂನಿಂದ ಐದು ಬಾರಿ ರಾಜ್ಯಸಭೆಗೆ ಆಯ್ಕೆಯಾಗಿದ್ದ ಅವರು, ಅಲ್ಪಾವಧಿಗೆ ರಾಜಸ್ಥಾನದಿಂದ ಆಯ್ಕೆಯಾಗಿ ಮೇಲ್ಮನೆ ಪ್ರವೇಶಿಸಿದ್ದರು. 1998ರ ಮಾರ್ಚ್ 21 ರಿಂದ 2004ರ ಮೇ 21ರವರೆಗೆ ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿದ್ದರು.

## ಮನಮೋಹನ್ ಬಾಲ್ಯ – ಶಿಕ್ಷಣ

ಮನಮೋಹನ ಸಿಂಗ್ ಅವರು 1932ರ ಸೆಪ್ಟೆಂಬರ್ 26 ರಂದು ಅವಿಭಜಿತ ಭಾರತದ ಪಂಜಾಬ್ ಪ್ರಾಂತ್ಯದಲ್ಲಿ ಜನಿಸಿದರು. ಡಾ.ಸಿಂಗ್ ಅವರು ಮೆಟ್ರಿಕ್ಯುಲೇಷನ್ ಪರೀಕ್ಷೆಯನ್ನು 1948ರಲ್ಲಿ ಪಂಜಾಬ್ ವಿಶ್ವವಿದ್ಯಾಲಯದಿಂದ ಪೂರ್ಣಗೊಳಿಸಿದರು. ಬಳಿಕ ಅವರು ಇಂಗ್ಲೆಂಡ್‌ನ ಕೇಂಬ್ರಿಜ್ಡ್ ವಿಶ್ವವಿದ್ಯಾಲಯದಲ್ಲಿ ಮುಂದುವರಿಸಿದರು. ಅಲ್ಲಿ ಅವರು 1957ರಲ್ಲಿ ಪ್ರಥಮ ದರ್ಜೆಯೊಂದಿಗೆ ಅರ್ಥಶಾಸ್ತ್ರದಲ್ಲಿ ಆನರ್ಸ್ ಪದವಿ ಪಡೆದರು. 1971ರಲ್ಲಿ ಡಾ. ಮನಮೋಹನ್ ಸಿಂಗ್ ಅವರು ವಾಣಿಜ್ಯ ಸಚಿವಾಲಯದಲ್ಲಿ ಆರ್ಥಿಕ ಸಲಹೆಗಾರರಾಗಿ ಭಾರತ ಸರಕಾರದ ಭಾಗವಾದರು. 1972ರಲ್ಲಿ ಇವರನ್ನು ಹಣಕಾಸು ಸಚಿವಾಲಯದ ಮುಖ್ಯ ಆರ್ಥಿಕ ಸಲಹೆಗಾರರಾಗಿ ನೇಮಕ ಮಾಡಲಾಯಿತು. ಡಾ. ಸಿಂಗ್ ಅವರು ಹಣಕಾಸು ಸಚಿವಾಲಯದಲ್ಲಿ ಕಾರ್ಯದರ್ಶಿಯಾಗಿ, ಯೋಜನಾ ಆಯೋಗದ ಉಪಾಧ್ಯಕ್ಷರಾಗಿ, ಭಾರತೀಯ ರಿಸರ್ವ್ ಬ್ಯಾಂಕ್ ಗೌವರ್ನರ್ ಆಗಿ, ಪ್ರಧಾನಮಂತ್ರಿಗಳ ಸಲಹೆಗಾರರಾಗಿ, ವಿಶ್ವವಿದ್ಯಾಲಯ ಅನುದಾನ ಆಯೋಗದ ಅಧ್ಯಕ್ಷರಾಗಿ, ಸರಕಾರದ ವಿವಿಧ ಹುದ್ದೆಗಳಲ್ಲಿ ಉನ್ನತ ಸ್ಥಾನವನ್ನು ಅವರು ಅಲಂಕರಿಸಿದರು. ಅಂತಿಮವಾಗಿ ಅವರು 2004 ರಿಂದ 2014ರವರೆಗೆ ಭಾರತದ 14ನೇ ಪ್ರಧಾನ ಮಂತ್ರಿಯಾಗಿ ಸೇವೆ ಸಲ್ಲಿಸಿದ್ದಾರೆ. 1991 ರಿಂದ 1996 ರವರೆಗೆ ಡಾ.ಸಿಂಗ್ ಅವರು ಭಾರತದ ಹಣಕಾಸು ಸಚಿವರಾಗಿ ಸೇವೆ ಸಲ್ಲಿಸಿದ್ದರು. ಅವರು ಆಗ ಮಾಡಿದ ಆರ್ಥಿಕ ಸುಧಾರಣೆಗಳಿಗೆ ಈಗಲೂ ವಿಶ್ವದ ಮನ್ನಣೆ ಇದೆ. ಜನಪ್ರಿಯ ದೃಷ್ಟಿಕೋನದಿಂದ ನೋಡುವುದಾದರೆ ಭಾರತದ ಅಂದಿನ ದಿನಗಳು ಡಾ. ಸಿಂಗ್ ಅವರ ವ್ಯಕ್ತಿತ್ವವನ್ನು ಬಿಂಬಿಸುತ್ತವೆ.

## ಹಣಕಾಸು ಸಚಿವರಾಗಿ ಸಾಧನೆ

1991ರಲ್ಲಿ ಪಿ.ವಿ.ನರಸಿಂಹರಾವ್ ಸರಕಾರದ ಅಡಿಯಲ್ಲಿ ಹಣಕಾಸು ಸಚಿವರಾಗಿ ಕೆಲಸ ಮಾಡಿದ ಅವರು, ಆರ್ಥಿಕ ಉದಾರೀಕರಣ ನೀತಿ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದರು. ಭಾರತದಲ್ಲಿ ವಿದೇಶಿ ಹೂಡಿಕೆ ಮಾಡಲು ಒಪ್ಪಿಗೆ ನೀಡಿದ್ದು ಅವರು ಹಣಕಾಸು ಸಚಿವರಾಗಿದ್ದ ಕಾಲದಲ್ಲಿ ಕೈಗಾರಿಕೆಗಳ ಅಭಿವೃದ್ಧಿಗೆ ಇದು ಬುನಾದಿಯಾಗಿದ್ದು ಭಾರತದ ಆರ್ಥಿಕ ಬೆಳವಣಿಗೆಗೆ ವೇಗ ನೀಡಿತು.

## ಪ್ರಧಾನಿಯಾಗಿ ಸಿಂಗ್ ಸಾಧನೆ

2004ರಲ್ಲಿ ಯುಪಿಎ ಸರಕಾರ ಬಹುಮತ ಪಡೆದಾಗ ಡಾ. ಮನಮೋಹನ್ ಸಿಂಗ್ ಪ್ರಧಾನಿಯಾಗಿ ಆಯ್ಕೆಯಾದಾಗ ಎಲ್ಲರೂ ಆಚ್ಚರಿಗೊಂಡಿದ್ದರು. ಆದರೆ ಮನಮೋಹನ್ ಸಿಂಗ್ ಮುಂದಿನ ಒಂದು ದಶಕ ಪ್ರಧಾನಿಯಾಗಿ ಹಲವು ಸಾಧನೆಗಳನ್ನು ಮಾಡುವ ಮೂಲಕ ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿದರು. ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ ಭಾರತ ಸ್ಥಿರವಾದ ಆರ್ಥಿಕ ಬೆಳವಣಿಗೆ ಕಂಡಿತು. ಇಂದು ಭಾರತ ಜಗತ್ತಿನ ಪ್ರಮುಖ ಆರ್ಥಿಕ ಶಕ್ತಿಯಾಗುವತ್ತ ಮುನ್ನಡೆಯುತ್ತಿದ್ದು ಇದಕ್ಕೆ ಬುನಾದಿ ಹಾಕಿದ್ದು ಅಂದಿನ ಪ್ರಧಾನಿ ಮನಮೋಹನ್ ಸಿಂಗ್. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಕಾಯಿದೆಯಂತಹ ಪ್ರಮುಖ ಕಾರ್ಯಕ್ರಮಗಳ ಮೂಲಕ ಗ್ರಾಮೀಣ ಭಾಗದಲ್ಲಿ ಉದ್ಯೋಗಗಳನ್ನು ಸೃಷ್ಟಿಸಲಾಯಿತು.

ಮಹಾಮಂಡಳದ ವತಿಯಿಂದ ದಿವಂಗತ ಆರ್ಥಿಕ ತಜ್ಞ ಮಾಜಿ ಪ್ರಧಾನಿ ಮನಮೋಹನ್‌ಸಿಂಗ್ ರವರ ನಿಧನಕ್ಕೆ ಸಂತಾಪ ಸೂಚಿಸಲಾಯಿತು.

# ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯ ಹರಿಕಾರ ಆಧುನಿಕ ಬೆಂಗಳೂರು ನಿರ್ಮಾತೃ, ಮುತ್ಸದ್ದಿ ರಾಜಕಾರಣಿ, ಮಾಜಿ ಮುಖ್ಯಮಂತ್ರಿ ಸೋಮನಹಳ್ಳಿ ಮಲ್ಲಯ್ಯ ಕೃಷ್ಣ ನಿಧನ



**ಬೆಂಗಳೂರು :** ಮುತ್ಸದ್ದಿ ರಾಜಕಾರಣಿ, ಮಾಜಿ ಮುಖ್ಯಮಂತ್ರಿ, ಮಾಜಿ ಕೇಂದ್ರ ಸಚಿವರು ಆದ ಸೋಮನಹಳ್ಳಿ ಮಲ್ಲಯ್ಯ ಕೃಷ್ಣ ಅವರು ಡಿಸೆಂಬರ್ 10 ರಂದು ಬೆಂಗಳೂರಿನ ತಮ್ಮ ಸ್ವಗೃಹದಲ್ಲಿ ವಯೋಸಹಜ ಖಾಯಿಲೆಯಿಂದ ನಿಧನ ಹೊಂದಿದರು. ಶ್ರೀಯುತರಿಗೆ 93 ವರ್ಷ ವಯಸ್ಸಾಗಿತ್ತು. ಕಳೆದ ಕೆಲ ತಿಂಗಳುಗಳಿಂದ ಶ್ವಾಸಕೋಶ ಸೋಂಕು, ಆರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದ ಅವರು ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಗುಣಮುಖರಾದ ಬಳಿಕ ಮನೆಗೆ ಮರಳಿ ಕುಟುಂಬದೊಂದಿಗೆ ಕಾಲ ಕಳೆಯುತ್ತಿದ್ದ ಅವರು ವಯೋಸಹಜವಾಗಿ ಕೊನೆಯುಸಿರೆಳೆದರು. ಇವರು ಪತ್ನಿ ಪ್ರೇಮಾ, ಪುತ್ರಿಯರಾದ ಶಾಂಭವಿ ಮತ್ತು ಮಾಳವಿಕ, ಮೊಮ್ಮಕ್ಕಳು, ಅಪಾರ ಬಂಧುಗಳನ್ನು, ಅಭಿಮಾನಿಗಳನ್ನು ಆಗಲಿದ್ದಾರೆ.

ಎಸ್.ಎಂ. ಕೃಷ್ಣ ಅವರು ತಮ್ಮ ರಾಜಕೀಯ ಜೀವನದಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದಲ್ಲಿ ಸೇವೆ ಸಲ್ಲಿಸಿದ ಸಂದರ್ಭದಲ್ಲಿ ಹಲವಾರು ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಕಾರಣೀಭೂತರಾಗಿದ್ದರು.

ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ 2003ರಲ್ಲಿ ಸಹಕಾರ ಇಲಾಖೆಯ ಮೂಲಕ ರೈತರ ಆರೋಗ್ಯ ರಕ್ಷಣೆಗಾಗಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯನ್ನು ಜಾರಿಗೊಳಿಸಿದ್ದರು. ಈ ಮಹಾತ್ವಾಕಾಂಕ್ಷಿ ಯೋಜನೆಯು ಪ್ರಸ್ತುತ ಮುಂದುವರೆದಿದ್ದು, ಈವರೆಗೂ 10 ಲಕ್ಷಕ್ಕೂ ಅಧಿಕ ಸದಸ್ಯರು ಯೋಜನೆಯ ಪ್ರಯೋಜನಗಳನ್ನು ಪಡೆದಿದ್ದಾರೆ.

ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನ ಸೋಮನಹಳ್ಳಿಯವರಾದ ಕೃಷ್ಣ ಅವರು 1932ರ ಮೇ 1 ರಂದು ಎಸ್.ಸಿ. ಮಲ್ಲಯ್ಯ ಮತ್ತು ತಾಯಮ್ಮ ದಂಪತಿಗೆ ಜನಿಸಿದ್ದರು. ರಾಜ್ಯ ರಾಜಕಾರಣದಲ್ಲಿ ಹಂತ ಹಂತವಾಗಿ ಮೇಲೇರಿದ ಅವರು ಸಚಿವ, ವಿಧಾನಸಭೆಯ ಸ್ಪೀಕರ್, ಉಪಮುಖ್ಯಮಂತ್ರಿ, ಮುಖ್ಯಮಂತ್ರಿಯಾಗಿ ಬಳಿಕ ಮಹಾರಾಷ್ಟ್ರ ರಾಜ್ಯಪಾಲರಾಗಿ, ಕೇಂದ್ರದ ಯುಪಿಎ ಸರ್ಕಾರದಲ್ಲಿ ವಿದೇಶಾಂಗ ಸಚಿವರಾಗಿ ಸೇವೆ ಸಲ್ಲಿಸಿದ್ದರು.

ಮೃತರ ಅಂತ್ಯ ಕ್ರಿಯೆಯನ್ನು ಅವರ ಸ್ವಗ್ರಾಮ ಸೋಮನಹಳ್ಳಿಯಲ್ಲಿ ಡಿಸೆಂಬರ್ 13 ರಂದು ನೆರವೇರಿಸಲಾಯಿತು. ಮೃತರ ಗೌರವಾರ್ಥ ರಾಜ್ಯ ಸರ್ಕಾರ ಸರ್ಕಾರಿ ಕಚೇರಿಗಳು, ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಿ, 3 ದಿನಗಳ ಕಾಲ ಶೋಕಾಚರಣೆಯನ್ನು ಆಚರಿಸಲಾಯಿತು.

ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ದಿವಂಗತ ಎಸ್.ಎಂ. ಕೃಷ್ಣ ಅವರಿಗೆ ಉಭಯ ಸದನಗಳಲ್ಲಿ ಸಂತಾಪ ವ್ಯಕ್ತಪಡಿಸಲಾಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರುಗಳು, ವಿರೋಧ ಪಕ್ಷದ ನಾಯಕರುಗಳು ಹಾಗೂ ಶಾಸಕರುಗಳು ಎಸ್.ಎಂ. ಕೃಷ್ಣ ಅವರ ರಾಜಕೀಯ ಹಾಗೂ ಸಾಂಸ್ಕೃತಿಕ ಸೇವೆಯನ್ನು ಸ್ಮರಿಸಿ, ಸಂತಾಪ ವ್ಯಕ್ತಪಡಿಸಿದರು.

ನಿಧನದ ಸುದ್ದಿ ತಿಳಿಯುತ್ತಿದ್ದಂತೆ ರಾಜಕೀಯ ನಾಯಕರು, ಮುಖಂಡರು, ಅಧಿಕಾರಿಗಳು, ಹಾಲಿ, ಮಾಜಿ ಸಚಿವರು, ಸಂಸದರು, ಶಾಸಕರು, ಅಪಾರ ಸಂಖ್ಯೆಯ ಅಭಿಮಾನಿಗಳು, ಸಂಬಂಧಿಕರು, ಸ್ನೇಹಿತರು ಆಗಮಿಸಿ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು.


ಮಾಜಿ ಮುಖ್ಯಮಂತ್ರಿಗಳಾದ ವೀರಪ್ಪ ಮೊಯ್ಲಿ, ಡಿ.ವಿ.ಸದಾನಂದಗೌಡ, ಸಂಸದ ಡಾ। ಸಿ.ಎನ್. ಮಂಜುನಾಥ, ಶಾಸಕರಾದ ಡಾ। ಸಿ.ಎನ್. ಅಶ್ವತ್ಥನಾರಾಯಣ, ಸಿದ್ದಗಂಗಾ ಕ್ಷೇತ್ರದ ಸಿದ್ದಲಿಂಗ ಸ್ವಾಮೀಜಿ, ಆದಿಚುಂಚನಗಿರಿ ಪೀಠಾಧ್ಯಕ್ಷರಾದ ನಿರ್ಮಲಾನಂದ ಸ್ವಾಮೀಜಿ, ಸುತ್ತೂರಿನ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರು ಪಾರ್ಥೀವ ಶರೀರದ ಅಂತಿಮ ದರ್ಶನ ಪಡೆದರು. ಕೃಷ್ಣ ಅವರೊಂದಿಗಿನ ಒಡನಾಟವನ್ನು ಸ್ಮರಿಸಿದರು.

ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಸ್.ಎಂ. ಕೃಷ್ಣ ಅವರ ನಿವಾಸಕ್ಕೆ ಭೇಟಿ ನೀಡಿ ಎಸ್.ಎಂ. ಕೃಷ್ಣ ಅವರಿಗೆ ಗೌರವ ಸಲ್ಲಿಸಿ, ನಂತರ ಕುಟುಂಬ ವರ್ಗದವರಿಗೆ ಸಾಂತ್ವನ ಹೇಳಿದರು. ಬೆಳಗಾವಿಯಿಂದ ನಗರಕ್ಕೆ ಆಗಮಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೃಷ್ಣ ಅವರ ಪಾರ್ಥಿವ ಶರೀರದ ದರ್ಶನ ಪಡೆದು ಭಾವುಕರಾಗಿ ಕಣ್ಣೀರಿಟ್ಟರು.

ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಮತ್ತು ಸಂಸದ ಬಸವರಾಜ ಬೊಮ್ಮಾಯಿ ಅವರು ಪ್ರಧಾನಿ ನರೇಂದ್ರ ಮೋದಿ ರವರು ಕಳುಹಿಸಿದ್ದ ಸಂತಾಪ ಸಂದೇಶದ ಪತ್ರವನ್ನು ಪ್ರೇಮಾ ಕೃಷ್ಣ ರವರಿಗೆ ನೀಡಿ, ಅವರ ಕುಟುಂಬದ ಸದಸ್ಯರುಗಳಿಗೆ ಸಾಂತ್ವನ ಹೇಳಿದರು.

ಮಹಾಮಂಡಳದ ವತಿಯಿಂದ ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ಎಂ. ಕೃಷ್ಣರವರ ನಿಧನಕ್ಕೆ ಸಂತಾಪ ವ್ಯಕ್ತಪಡಿಸಲಾಯಿತು.

**SAHAKARA VARTHA PATHRIKE KANNADA MONTHLY**
RNI-Reg No.KARKAN/2018/75796
Post Reg No.KA-BGW/1816/2025-27
Posting Date : 1 and 5 Every Month
Posted at : P/C RMS Bhavan, Bangalore PSO,
Blore-26 Published On : 31st of Previous Month
License to post without prepayment
PMG BG/WPP-405/2025-27




ಇಂದ : ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿಯಮಿತ
ಬೆಂಗಳೂರು ನಂ. 126 1ನೇ ಮುಖ್ಯರಸ್ತೆ, 2ನೇ ಅಡ್ಡರಸ್ತೆ, ಜೆಬಿ ಕಾವಲ್,
ರಾಜೀವ್‌ಗಾಂಧಿ ನಗರ, ನಂದಿನಿ ಲೇಔಟ್, ಬೆಂಗಳೂರು–560096

**Printed at : Biligiri Printers**
**Chamrajpet, Bengaluru - 18**

## ಸಂಪಾದಕೀಯ



ವಿ. ರಾಜು
ಅಧ್ಯಕ್ಷರು

**ಸಹಕಾರ ಚಳುವಳಿಯ ಬೇರು ಬೆಳೆಯುತ್ತಿದೆ. ಹಾಗೆಯೇ ಸಹಕಾರ ವೃಕ್ಷದ ಕಾಂಡ ಟೊಂಗೆಗಳು ವಿಸ್ತರಿಸಿದಂತೆ, ನಾವೆಲ್ಲರೂ ಹೊಸ ವರ್ಷದಲ್ಲಿ ಭವಿಷ್ಯದ ನಿರ್ಮಾಣಕ್ಕಾಗಿ ಹೊಸ ನಿರ್ಣಯ ಚಿಂತನೆಗಳೊಂದಿಗೆ ಮುಂದೆ ಸಾಗಬೇಕಾದದ್ದು ಇದೆ. ಉತ್ತಮ ಸೇವೆಗಳ ಮೂಲಕ ಜನರಲ್ಲಿ ವಿಶ್ವಾಸ, ನಂಬಿಕೆ ಹೆಚ್ಚಿಸಿಕೊಳ್ಳುವುದಲ್ಲದೆ ಮಹಿಳೆಯರು ಯುವಜನರು ಸಹಕಾರ ಚಳುವಳಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಳ್ಳಲು ಸಹಕಾರಿಗಳು ಹೆಚ್ಚು ಕ್ರಿಯಾಶೀಲರಾಗಬೇಕಿದೆ.**

# 2025 ಹೊಸ ವರ್ಷ – ಹೊಸ ನಿರ್ಣಯ

2025ರ ವರ್ಷ ಪ್ರಾರಂಭವಾಗಿದೆ.2024ರ ವರ್ಷದಲ್ಲಿ ಸಂತಸ ನೋವುಗಳನ್ನು ಕಂಡಿದ್ದೇವೆ. ಸಹಕಾರ ಸಂಸ್ಥೆಗಳು ಸದಾ ಅಭಿವೃದ್ಧಿಯ ವೇಗವನ್ನು ಹೆಚ್ಚಿಸಿಕೊಳ್ಳಲು ಪ್ರಯತ್ನ ಮಾಡುತ್ತಲೇ ಇವೆ. ಸೇವೆಗಳ ಜೊತೆಗೆ ಶಾಖೆಗಳ ವಿಸ್ತರಣೆ ಜೊತೆ ಉದ್ಯೋಗ ಅವಕಾಶಗಳನ್ನು ಸೃಷ್ಟಿಸುತ್ತಲೇ ಬಂದಿವೆ. ಭಾರತ ಸಹಕಾರ ಚಳವಳಿ ಸಂಘಗಳ ಸಂಖ್ಯೆಯಲ್ಲಿ ಹಣಕಾಸಿನ ಗಾತ್ರದಲ್ಲಿ, ಸದಸ್ಯತ್ವದಲ್ಲಿ ವಿಶ್ವದಲ್ಲಿಯೇ ಮೊದಲ ಸ್ಥಾನದಲ್ಲಿದೆ. ವಿಕಸಿತ ಭಾರತ ನಿರ್ಮಾಣದಲ್ಲಿ ಸಹಕಾರಿಗಳು, ಸಹಕಾರ ಸಂಸ್ಥೆಗಳ ಪಾತ್ರ ಮಹತ್ವದ್ದಾಗಿದೆ.

ಸಹಕಾರ ಚಳುವಳಿಯ ಬೇರು ಬೆಳೆಯುತ್ತಿದೆ. ಹಾಗೆಯೇ ಸಹಕಾರ ವೃಕ್ಷದ ಕಾಂಡ ಟೊಂಗೆಗಳು ವಿಸ್ತರಿಸಿದಂತೆ, ನಾವೆಲ್ಲರೂ ಹೊಸ ವರ್ಷದಲ್ಲಿ ಭವಿಷ್ಯದ ನಿರ್ಮಾಣಕ್ಕಾಗಿ ಹೊಸ ನಿರ್ಣಯ ಚಿಂತನೆಗಳೊಂದಿಗೆ ಮುಂದೆ ಸಾಗಬೇಕಾದದ್ದು ಇದೆ.

ಉತ್ತಮ ಸೇವೆಗಳ ಮೂಲಕ ಜನರಲ್ಲಿ ವಿಶ್ವಾಸ, ನಂಬಿಕೆ ಹೆಚ್ಚಿಸಿಕೊಳ್ಳುವುದಲ್ಲದೆ ಮಹಿಳೆಯರು ಯುವಜನರು ಸಹಕಾರ ಚಳುವಳಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಳ್ಳಲು ಸಹಕಾರಿಗಳು ಹೆಚ್ಚು ಕ್ರಿಯಾಶೀಲರಾಗಬೇಕಿದೆ.

2025ರ ವರ್ಷವನ್ನು ಅಂತರಾಷ್ಟ್ರೀಯ ಸಹಕಾರಿಗಳ ವರ್ಷ ಎಂದು ಈಗಾಗಲೇ ಘೋಷಿಸಲಾಗಿದೆ. ಪ್ರಥಮ ಹಂತದಲ್ಲಿ ನವಂಬರ್ ಮಾಹೆಯಲ್ಲಿ ನವದೆಹಲಿಯಲ್ಲಿ ಇಫ್ಕೊ ನೇತೃತ್ವದಲ್ಲಿ ಅಂತರಾಷ್ಟ್ರೀಯ ಸಮ್ಮೇಳನವು ನಡೆದಿದೆ. 2025ರ ವರ್ಷದಲ್ಲಿ ನಾವೆಲ್ಲರೂ ಚಳವಳಿಯ ಬೆಳವಣಿಗೆಗೆ ಬದ್ಧತೆ–ದಕ್ಷತೆಯೊಂದಿಗೆ ಶ್ರಮಿಸೋಣ. ಈ ಬಗ್ಗೆ ಸಂಕಲ್ಪ ಮಾಡೋಣ

2025ರ ನೂತನ ವರ್ಷದ ಜೊತೆಗೆ ಜನವರಿ ಮಾಹೆಯಲ್ಲಿ ಮಕರ ಸಂಕ್ರಾಂತಿ ಹಬ್ಬ, ಗಣರಾಜ್ಯೋತ್ಸವ ಆಚರಣೆ ನಡೆಯಲಿದ್ದು ಸಮಸ್ತ ಸಹಕಾರಿ ಬಂಧುಗಳಿಗೆ ಪತ್ರಿನ ಸಹಕಾರ ಸಂಘಗಳ ಮಹಾಮಂಡಳದ ಪರವಾಗಿ ಶುಭಾಶಯಗಳು.

ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

ಸಹಕಾರ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

**ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು**

ನಂ. 126, 1ನೇ ಮುಖ್ಯರಸ್ತೆ, 2ನೇ ಅಡ್ಡರಸ್ತೆ ಜೆಬಿ ಕಾವಲ್,
ರಾಜೀವ್‌ಗಾಂಧಿ ನಗರ, ನಂದಿನಿ ಲೇಔಟ್, ಬೆಂಗಳೂರು–560096
ದೂರವಾಣಿ ಸಂಖ್ಯೆ :
080–23564444 / 23464033 / 23464034
ಇ–ಮೇಲ್ : info@ksccsf.org
ksccsfltd@gmail.com, ವೆಬ್ : www.ksccsf.org

**ಸಂಪಾದಕ ಮಂಡಳಿ**

ಅಧ್ಯಕ್ಷರು / ಪ್ರಧಾನ ಸಂಪಾದಕರು :
**ಶ್ರೀ ವಿ. ರಾಜು**
ಕಾರ್ಯನಿರ್ವಾಹಕ ಸಂಪಾದಕರು:
**ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ**
ಸದಸ್ಯರು : **ಡಾ॥ ಸಂಜಯ ಪಿ. ಹೊಸಮಠ**
**ಶ್ರೀ ಎಂ.ಜಿ. ನರೇಂದ್ರಕುಮಾರ**
**ಶ್ರೀ ಕೆ. ಕೃಷ್ಣಮೂರ್ತಿ**
**ಶ್ರೀ ಡಿ.ಆರ್. ನಾಗೇಶಪ್ಪ**
**ಶ್ರೀ ಹೊನ್ನಯ್ಯ ವೀ ಹಿರೇಮಠ**
**ಶ್ರೀ ಚಿತ್ತರಂಜನ್ ಬೋಳಾರ್**
ಸಂಪಾದಕರು :
**ಪ್ರಜ್ವಲ್ ಕೆ.ಎನ್.**
ಮುಖ್ಯಕಾರ್ಯನಿರ್ವಹಣಾಧಿಕಾರಿ

## ಉತ್ತರ ಕನ್ನಡ ಜಿಲ್ಲೆ, ಯಲ್ಲಾಪುರದ ಮಂಗಲಮೂರ್ತಿ ಕೋ-ಆಪ್ ಕ್ರೆಡಿಟ್ ಸೊಸಾಯಟಿ

# “ಉತ್ತಮ ಸಹಕಾರಿ ಸಂಘ” ಹಾಗೂ ಜಿಲ್ಲಾ ಪ್ರಶಸ್ತಿ




ಮಂಗಲಮೂರ್ತಿ ಕೋ–ಆಪ್ ಕ್ರೆಡಿಟ್ ಸೊಸಾಯಟಿ ಲಿ., ಯಲ್ಲಾಪುರ ಉತ್ತರ ಕನ್ನಡ ಜಿಲ್ಲೆ ಈ ಸಹಕಾರಿ ಸಂಘಕ್ಕೆ ಸಹಕಾರಿ ಸಂಘದ ಅತ್ಯುತ್ತಮ ಕಾರ್ಯನಿರ್ವಹಣೆಗಾಗಿ ಕೆ.ಡಿ.ಸಿ.ಸಿ. ಬ್ಯಾಂಕ್ ನೀಡುವ "ಉತ್ತಮ ಸಹಕಾರಿ ಸಂಘ" ನಗದು ಬಹುಮಾನ ಸಹಿತ ಜಿಲ್ಲಾ ಪ್ರಶಸ್ತಿಯನ್ನು ಸಹಕಾರ ಸಪ್ತಾಹದ ಅಂಗವಾಗಿ ದಿ : 16.11.2024ರಂದು ನಡೆದ ಕಾರ್ಯಕ್ರಮದಲ್ಲಿ ಕೆ.ಡಿ.ಸಿ.ಸಿ. ಬ್ಯಾಂಕಿನಿಂದ ಪ್ರದಾನ ಮಾಡಲಾಯಿತು.

ಸಂಘದ ಪರವಾಗಿ ನಿರ್ದೇಶಕರಾದ ಶ್ರೀ ಸುಬ್ಬಣ್ಣ ಕುಂಟೇಕಣಿ, ನವೀನ್ ಕಿರಗಾರಿ ಹಾಗೂ ಮುಖ್ಯಕಾರ್ಯನಿರ್ವಾಹಕರಾದ ಶ್ರೀ ಎಮ್.ಆರ್. ಭಟ್ಟ್ ವಡ್ರಮನೆ ಇವರು ಪ್ರಶಸ್ತಿಯನ್ನು ಸ್ವೀಕರಿಸಿದರು. ಪ್ರಶಸ್ತಿ ಪ್ರಧಾನ ಮಾಡಿದ ಮಾಜಿ ಸಚಿವರು ಹಾಗೂ ಹಾಲಿ ಶಾಸಕರು, ಕೆ.ಡಿ.ಸಿ.ಸಿ. ಬ್ಯಾಂಕಿನ ಅಧ್ಯಕ್ಷರಾದ ಮಾನ್ಯ ಶ್ರೀ ಶಿವರಾಮ್ ಹೆಬ್ಬಾರ್ ಹಾಗೂ ಉಪಾಧ್ಯಕ್ಷರಾದ ಶ್ರೀ ಮೊಹನದಾಸ್ ನಾಯಕ್ ಇವರು ಸಂಘವು ಇನ್ನು ಹೆಚ್ಚಿನ ರೀತಿಯಲ್ಲಿ ಅಭಿವೃದ್ಧಿಯನ್ನು ಹೊಂದಿ ರಾಜ್ಯದ ಮಾದರಿ ಸಹಕಾರಿ ಸಂಸ್ಥೆ ಆಗಲೆಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಕೆ.ಡಿ.ಸಿ.ಸಿ. ಬ್ಯಾಂಕಿನ ಎಮ್.ಡಿ. ಶ್ರೀಕಾಂತ ಜಿ. ಭಟ್ಟ್ ಹಾಗೂ ನಿರ್ದೇಶಕರು ಮತ್ತು ಹಿರಿಯ ಸಹಕಾರಿ ಧುರೀಣರು ಉಪಸ್ಥಿತರಿದ್ದರು.

**ಸುಭಾಷಿತ :** ಬೆಚ್ಚನೆ ಮನೆ ಇರಲು ವೆಚ್ಚಕೆ ಹೊನ್ನಿರಲು ಇಚ್ಛೆಯನರಿವ ಸತಿಯಿರಲು ಸ್ವರ್ಗಕ್ಕೆ ಕಿಚ್ಚು ಹಚ್ಚೆಂದ ಸರ್ವಜ್ಞ – ಸರ್ವಜ್ಞ

ಸಹಕಾರ ವಾರ್ತಾ ಪತ್ರಿಕೆ ಚಂದಾದಾರರಾಗ ಬಯಸುವವರು ಚಂದಾ ಹಣವನ್ನು “ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು” ಇವರ ಹೆಸರಿಗೆ ಚೆಕ್ ಅಥವಾ ಡಿಡಿಯನ್ನು ಬರೆದು ಕಳುಹಿಸಬೇಕಾಗಿ ವಿನಂತಿ. - ಸಿ.ಇ.ಒ.
ಐದು ವರ್ಷಗಳ ಚಂದಾ: ರೂ : 1770/-

**ಸೂಚನೆ :**
ಈ ಪತ್ರಿಕೆಯಲ್ಲಿ ಪ್ರಕಟವಾಗುವ ಲೇಖನಗಳಲ್ಲಿನ ಅನಿಸಿಕೆ, ಅಭಿಪ್ರಾಯಗಳು ಆಯಾ ಬರಹಗಾರರದೇ ಆಗಿರುತ್ತದೆ ವಿನಃ ಪತ್ರಿಕೆ / ಮಹಾಮಂಡಳದ ವಿಚಾರಗಳಾಗಿರುವುದಿಲ್ಲ.
- ಸಂಪಾದಕರು,
ಸಹಕಾರ ವಾರ್ತಾ ಪತ್ರಿಕೆ.

# ಮಂಡ್ಯದಲ್ಲಿ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ
# ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಚಾಲನೆ



**ಮಂಡ್ಯ :** ಸಕ್ಕರೆ ನಗರಿ ಮಂಡ್ಯದಲ್ಲಿ ಮೂರು ದಿನಗಳ ಕಾಲ ನಡೆದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಲನೆ ನೀಡಿದರು.

ಕರ್ನಾಟಕದಲ್ಲಿ ಅತಿ ಹೆಚ್ಚು ಕನ್ನಡ ಮಾತನಾಡುವ ಜಿಲ್ಲೆಯೆಂದು ಹೆಸರು ಪಡೆದಿರುವ ಹಾಗೂ ಸಕ್ಕರೆ ನಗರಿ ಎಂದೇ ಪ್ರಸಿದ್ಧವಾಗಿರುವ ಮಂಡ್ಯದಲ್ಲಿ ಆಯೋಜಿಸಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅತ್ಯಂತ ಅಭಿಮಾನದಿಂದ ಹಾಗೂ ಸಂತೋಷದಿಂದ ಉದ್ಘಾಟಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಪರಭಾಷಿಕರಿಗೆ ಒಂದೇ ತಿಂಗಳಿಗೆ ಕನ್ನಡ ಕಲಿಸುವ ದಿಟ್ಟತನ ಮಂಡ್ಯ ಜಿಲ್ಲೆಗಿದೆ, ಹೊಸ ತಲೆಮಾರಿನ ಜನತೆ ಕನ್ನಡ ಪ್ರೀತಿ ಮುನ್ನಡೆಸಬೇಕಿದೆ. ಈ ಹಿಂದೆ ಶಿವಪುರದಲ್ಲಿ ಸತ್ಯಾಗ್ರಹ ಹೋರಾಟ, ದಿಟ್ಟತನ ಮರೆಯಲಾಗದು. ಕನ್ನಡ ಅಸ್ಮಿತೆ, ಅಸ್ತಿತ್ವಕ್ಕಾಗಿ ಹೋರಾಡಲು ಕನ್ನಡ ಸಾಹಿತ್ಯ ಸಮ್ಮೇಳನ ಸಹಕಾರಿ. 8 ಜ್ಞಾನಪೀಠ ಪ್ರಶಸ್ತಿ ನಮ್ಮವರಿಗೆ ಸಿಕ್ಕಿದೆ, ಸಮಗ್ರ ಕನ್ನಡ ಸಾಹಿತ್ಯ ಡಿಜಿಟಲೀಕರಣ ಯೋಜನೆ ಆರಂಭಿಸಲಾಗಿದೆ. ಸಮಗ್ರ ಕನ್ನಡ ಭಾಷಾ ಬಳಕೆ ಕಾಯ್ದೆ ತರಲಾಗಿದೆ, ಕನ್ನಡದ ಮೊದಲ ಪ್ರಾಶಸ್ತ್ಯ ತರಲು ಮುಂದಾಗಿದೆ. ಸಂಕಷ್ಟದಲ್ಲಿ ಕನ್ನಡ ಭಾಷೆಯೂ ಒಂದು, ಶಿಕ್ಷಣ ಕಲಿಕೆಯಲ್ಲಿ ಕೆಲವೊಂದು ತಪ್ಪು ಆಗುತ್ತಿವೆ. ಗಾಂಧೀಜಿ ಈ ಬಗ್ಗೆ ಇದೇ ಅಭಿಪ್ರಾಯ ನೀಡಿದ್ದಾರೆ. ವೈದಿಕ ಶಿಕ್ಷಣದ ರೀತಿ ಕಂಠಪಾಠ ಶಿಕ್ಷಣ ಕಲಿಕೆ ಆಗಬಾರದು, ಇದು ಯಾರಿಗೂ ಉಪಯೋಗವಾಗುವುದಿಲ್ಲ. ಕಲಿಕೆಯ ಕ್ರಮ ಬದಲಾಗಿದೆ, ಆಡಳಿತದಲ್ಲಿ ಕನ್ನಡ ಬಳಕೆಗೆ ಸರ್ಕಾರ ಬದ್ಧವಾಗಿದೆ. ಈ ಬಗ್ಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಸಾಹಿತಿ ಆದವರು ಜನಸಾಮಾನ್ಯರ ನೋವು ನಲಿವು ಪ್ರಸ್ತುತುಪಡಿಸಬೇಕು, ಸಾಹಿತ್ಯ ರಚನೆಯಲ್ಲಿ ತೊಡಗಿದವರು ಪಂಚೇಂದ್ರಿಯರು. ನಾವು ಬದುಕುತ್ತಿರುವ ಕಾಲಘಟ್ಟ ಅತ್ಯಂತ ವಿಷಮಯ, ಮನುಷ್ಯ – ಮನುಷ್ಯರ ನಡುವೆ ಕಂದಕ ಶುರು ಆಗ್ತಿದೆ. ಇಂಥ ಸಂದರ್ಭದಲ್ಲಿ ಸಂಪೂರ್ಣವಾಗಿ ಜನಪರವಾಗಿ ಸಾಹಿತ್ಯ ದಾಖಲಾಗುತ್ತಿಲ್ಲ. ಬದುಕಿಗೆ ಕೊಳ್ಳಿ ಇಟ್ಟವರ ಮಾತು ಕೇಳಬಾರದು, ಸರ್ವ ಧರ್ಮಗಳ ಸಾರ ತಿಳಿಸಬೇಕು. ಮಾಮೂಲಿ ಸಾಹಿತ್ಯ ಸಮ್ಮೇಳನವಾಗೋದು ಬೇಡ, ನಾಡಿನ ಸಮಗ್ರ ಅಭಿವೃದ್ದಿಗೆ ತೆ–ಂದರೆ ಆಗ್ತಿದೆ. ರಾಷ್ಟ ಭಾಷೆಯ ಹೆಸರಿನಲ್ಲಿ ಕನ್ನಡ ಭಾಷೆ ಮೇಲೆ ಕಡಗಣನೆ ಆಗ್ತಿದೆ, ಇದನ್ನು ನಾವು ಖಂಡಿಸದೇ ಹೋದರೆ ನಮ್ಮ ಕನ್ನಡ ಭಾಷೆಗೆ ಸಂಕಷ್ಟಬರಲಿದೆ ಎಂದು ಹೇಳಿದರು.


ಶ್ರೀ ಆದಿ ಚುಂಚನಗಿರಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರು ದಿವ್ಯ ಸಾನಿಧ್ಯ ವಹಿಸಿದ್ದರು. ಸಮ್ಮೇಳನಾಧ್ಯಕ್ಷರಾದ ನಾಡೋಜ ಡಾ. ಗೊ.ರು.ಚನ್ನಬಸಪ್ಪ, ಹಿರಿಯ ಸಾಹಿತಿಗಳಾದ ಡಾ. ದೊಡ್ಡರಂಗೇಗೌಡ, ಜ್ಞಾನ ಪೀಠ ಪ್ರಶಸ್ತಿ ಪುರಸ್ಕೃತರಾದ ಡಾ ಚಂದ್ರ ಶೇಖರ ಕಂಬಾರ, ವೇದಿಕೆಯ ಮೇಲೆ ಇದ್ದರು. ಈ ಸಂದರ್ಭದಲ್ಲಿ ಕೃಷಿ ಸಚಿವರಾದ ಚೆಲುವನಾರಾಯಣಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಡಾ ಹೆ.ಚ್.ಸಿ.ಮಹದೇವಪ್ಪ, ಆಹಾರ ಮತ್ತು ನಾಗರಿಕ ಪೂರೈಕೆ ಸಚಿವರಾದ ಮುನಿಯಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ್ ತಂಗಡಗಿ, ಕರ್ನಾಟಕ ವಿಧಾನಸಭೆ ಉಪ ಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ, ಶಾಸಕರಾದ ಪಿ.ಎಂ.ನರೇಂದ್ರ ಸ್ವಾಮಿ, ಪಿ.ರವಿಕುಮಾರ್, ಎಂ.ಬಿ,ರಮೇಶ್ ಬಂಡಿ ಸಿದ್ದೇಗೌಡ, ದರ್ಶನ್ ಪುಟ್ಟಣ್ಣಯ್ಯ, ಕೆ.ಎಂ. ಉದಯ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಮಹೇಶ್ ಜೋಷಿ, ಜಿಲ್ಲಾಧಿಕಾರಿ ಡಾ. ಕುಮಾರ ಮತ್ತಿತರರು ಉಪಸ್ಥಿತರಿದ್ದರು.





# 10ನೇ ತರಗತಿವರೆಗೆ ಕನ್ನಡ ಮಾಧ್ಯಮ ಕಡ್ಡಾಯ ಸಮ್ಮೇಳನಾಧ್ಯಕ್ಷ ಗೊ.ರು. ಚನ್ನಬಸಪ್ಪ (ಗೊರುಚ) ಹಕ್ಕೊತ್ತಾಯ


**ಮಂಡ್ಯ :** 'ಹತ್ತನೇ ತರಗತಿವರೆಗೆ ಕನ್ನಡ ಮಾಧ್ಯಮವೇ ಕಡ್ಡಾಯವಾಗಬೇಕು. ಇಂಗ್ಲಿಷ್ ಮಾಧ್ಯಮದ ಶಾಲೆಗಳನ್ನು ಸರ್ಕಾರ ತೆರೆಯುವುದನ್ನಾಗಲಿ, ಖಾಸಗಿ ಶಾಲೆಗಳಿಗೆ ಅನುಮತಿ ಕೊಡುವುದನ್ನಾಗಲೀ ಕೂಡಲೇ ನಿಲ್ಲಿಸಬೇಕು' ಎಂದು ಹಕ್ಕೊತ್ತಾಯ ಮಂಡಿಸುವ ಮೂಲಕ, 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷ ಗೊ.ರು. ಚನ್ನಬಸಪ್ಪ ಅವರು, 'ತಂತ್ರಜ್ಞಾನದ ನೆರವು ಪಡೆದು ಕನ್ನಡವನ್ನು ಕಿರಿಯ ಪೀಳಿಗೆಯ ಎದೆಗೆ ಬೀಳುವ ಅಕ್ಷರವಾಗಿಸಬೇಕು' ಎಂದು ಕರೆ ನೀಡಿದರು.



ಡಿಸೆಂಬರ್ 20 ರಿಂದ 22ರವರೆಗೆ ನಡೆದ ಸಮ್ಮೇಳನದ ಉದ್ಘಾಟನಾ ಭಾಷಣ ಮಾಡಿದ ಅವರು, ತಮ್ಮ ಸುದೀರ್ಘ 48 ಪುಟಗಳ ಭಾಷಣದಲ್ಲಿ, ಭಾಷೆ ಎದುರಿಸುತ್ತಿರುವ ಬಿಕ್ಕಟ್ಟುಗಳು, ಅಂತರರಾಜ್ಯ ಭಾಷಾ ವಿನಿಮಯ, ಹಿಂದಿ ಹೇರಿಕೆ, ತಂತ್ರಜ್ಞಾನದ ಅವಲಂಬನೆ, ಗಡಿನಾಡ ಕನ್ನಡಿಗರ ಬವಣೆ, ಪುಸ್ತಕ ಸಂಸ್ಕೃತಿಯ ಪೋಷಣೆ, ಮಹಿಳೆಯರಿಗೆ ದೊರಕದ ಸ್ಥಾನ–ಮಾನ ಸೇರಿದಂತೆ ಪ್ರಮುಖ ಅಂಶಗಳ ಕಡೆಗೆ ಸಮ್ಮೇಳನದಲ್ಲಿದ್ದ ಸರ್ಕಾರದ ಪ್ರತಿನಿಧಿಗಳು ಮತ್ತು ಮತ್ತು ಸಾವಿರಾರು ಜನರ ಗಮನ ಸೆಳೆದರು.

## ಪ್ರಮುಖ ಹಕ್ಕೊತ್ತಾಯಗಳು

- ಅಗತ್ಯವೆನಿಸಿರುವ ಇಂಗ್ಲಿಷ್ ಕಲಿಕೆಗೆ ಪ್ರತ್ಯೇಕ ವ್ಯವಸ್ಥೆ ಮಾಡಿ, ಬೋಧನೆಗೆ ತರಬೇತಿ ಪಡೆದ ಶಿಕ್ಷಕರನ್ನು ನೇಮಿಸಬೇಕು ಮತ್ತು ಗ್ರಾಮೀಣ ಭಾಗದ ಕನ್ನಡ ಶಾಲೆಗಳನ್ನು, ಎಲ್ಲ ಸೌಲಭ್ಯಗಳಿಂದ ಪೂರ್ಣವಾಗಿ ಸಜ್ಜುಗೊಳಿಸಬೇಕು. ರಾಜ್ಯದ ಆಯವ್ಯಯದಲ್ಲಿ ಕನಿಷ್ಟ ಶೇ.15ರಷ್ಟನ್ನು ಶಿಕ್ಷಣಕ್ಕೆ ಮೀಸಲಿಡಬೇಕು' ಎಂದು ಒತ್ತಾಯಿಸಿದರು.
- ಅನೇಕ ದಶಕಗಳಿಂದ ನನೆಗುದಿಗೆ ಬಿದ್ದಿರುವ ಸರೋಜಿನಿ ಮಹಿಷಿ ವರದಿಯನ್ನು ಕೂಡಲೇ ಶಾಸನಬದ್ಧಗೊಳಿಸಿ ಅನುಷ್ಠಾನ ಗೊಳಿಸಬೇಕು. ಅನುಷ್ಠಾನದ ಮೇಲ್ವಿಚಾರಣೆಯ ಹೊಣೆಗಾರಿಕೆಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ವಹಿಸಬೇಕು. ಸಾರ್ವಜನಿಕವಾಗಿರಲಿ, ಖಾಸಗಿಯಿರಲಿ ಉದ್ಯೋಗಾವಕಾಶಗಳಲ್ಲಿ ವಿಶೇಷ ಅರ್ಹತೆಯ ಉನ್ನತ ಹುದ್ದೆಗಳ ಹೊರತಾಗಿ ಸಿ ಮತ್ತು ಡಿ ವರ್ಗದ ಹುದ್ದೆಗಳನ್ನು ಪೂರ್ಣವಾಗಿ ಕನ್ನಡಿಗರಿಗೇ ಮೀಸಲಿಡಬೇಕು. ಕಾಲ–ಕಾಲಕ್ಕೆ ಉದ್ಯೋಗ ಮಾಹಿತಿ ದೊರೆಯುವಂತಾಗಬೇಕು' ಎಂದು ಅಭಿಪ್ರಾಯಪಟ್ಟರು.
- ನಾಡಿನ ವಿಶೇಷ ವ್ಯವಸ್ಥೆಗಳಾದ ಕನ್ನಡ ವಿಶ್ವವಿದ್ಯಾಲಯ ಮತ್ತು ಜಾನಪದ ವಿಶ್ವವಿದ್ಯಾಲಯಗಳು ಅನುಭವಿಸುತ್ತಿರುವ ಹಣಕಾಸು ಮತ್ತು ಬೋಧನಾ ಸಿಬ್ಬಂದಿ ಕೊರತೆಯನ್ನು ನಿವಾರಿಸಲು ಕೂಡಲೇ ಕ್ರಮಕೈಗೊಳ್ಳಬೇಕು.
- ಕನ್ನಡ ಶಾಸ್ತ್ರೀಯ ಭಾಷಾ ಕೇಂದ್ರವನ್ನು ಸ್ವತಂತ್ರ, ಸ್ವಾಯತ್ತ




ಕೇಂದ್ರವನ್ನಾಗಿ ಬೆಳೆಸಲು ಮತ್ತು ಕೇಂದ್ರದ ನೆರವನ್ನು ಪಡೆಯಲು ಅಗತ್ಯ ವ್ಯವಸ್ಥೆ ಮಾಡಬೇಕು

- ಅಪಾರ ಸಂಭಾವ್ಯ ಸಾಮರ್ಥ್ಯವಿರುವ ಪ್ರವಾಸೋದ್ಯಮವನ್ನು ಸಾಂಸ್ಕೃತಿಕ ಮತ್ತು ಶೈಕ್ಷಣಿಕ ದೃಷ್ಟಿಯಿಂದಷ್ಟೇ ಅಲ್ಲದೆ ಆದಾಯ ಮತ್ತು ಉದ್ಯೋಗಾವಕಾಶ ದೃಷ್ಟಿಯಿಂದಲೂ ಅದನ್ನು ವಿಸ್ತರಣೆಯ ವಲಯವನ್ನಾಗಿ ಅಭಿವೃದ್ಧಿಗೊಳಿಸಬೇಕು.
- ಕೈಗಾರಿಕೋದ್ಯಮಗಳ ಸ್ಥಾಪನೆ ಎಲ್ಲ ಜಿಲ್ಲೆಗಳಿಗೂ ಹಂಚಿಕೆಯಾಗಬೇಕು. ಯಾವುದೇ ಉದ್ಯಮವಿರಲಿ, ಅಲ್ಲಿ ಕನ್ನಡಿಗರಿಗೆ ಉದ್ಯೋಗಾವಕಾಶದ ಕಟ್ಟುನಿಟ್ಟಿನ ಷರತ್ತು ವಿಧಿಸಿ, ತಪ್ಪಿತಸ್ಥರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು.
- ಸರ್ಕಾರದ ಸಚಿವಾಲಯ ಕಚೇರಿಗಳ ಹೊರತಾಗಿ, ಉಳಿದ ಇಲಾಖೆಗಳ ನಿರ್ದೇಶನಾಲಯ ಕಚೇರಿಗಳನ್ನು ವಿವಿಧ ಜಿಲ್ಲಾ ಕೇಂದ್ರಗಳಿಗೆ ವರ್ಗಾಯಿಸಿ ಬೆಂಗಳೂರಿನ ಒತ್ತಡವನ್ನು ತಪ್ಪಿಸಬೇಕು' ಎಂದು ಗಮನ ಸೆಳೆದರು.
- ಶಿಕ್ಷಣ ಮಾಧ್ಯಮ ಅಂತಾರಾಜ್ಯ ಗಡಿ, ಜಲ ಮತ್ತು ವಲಸೆ ಸಮಸ್ಯೆಗಳನ್ನು ಪರಿಹರಿಸಲು ಒಂದು ರಾಷ್ಟ್ರೀಯ ನೀತಿಯನ್ನು ರೂಪಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಬೇಕು.
- ಪ್ರಾದೇಶಿಕ ಅಸಮಾನತೆಯನ್ನು ಸರಿಪಡಿಸುವ ದಿಸೆಯಲ್ಲಿ ಕಿತ್ತೂರು ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕದ ಭಾಗದ ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗೆ ಕಾಲಬದ್ಧ ಕ್ರಮಕೈಗೊಳ್ಳಬೇಕು.
- ಬಸವಣ್ಣನವರನ್ನು ರಾಜ್ಯದ 'ಸಾಂಸ್ಕೃತಿಕ ನಾಯಕ' ಎಂದು ಘೋಷಿಸಿರುವ ಮತ್ತು ಬಸವ ಕಲ್ಯಾಣದಲ್ಲಿ ನೂತನ ಅನುಭವ ಮಂಟಪವನ್ನು ನಿರ್ಮಿಸುತ್ತಿರುವ ರಾಜ್ಯ ಸರ್ಕಾರ, ಹನ್ನೆರಡನೆಯ ಶತಮಾನದ ಶರಣರ ಕ್ಷೇತ್ರಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಕಾರ್ಯಕ್ಕಾಗಿ ಸ್ವಾಯತ್ತ ಪ್ರಾಧಿಕಾರ ರಚಿಸಬೇಕು. ಈಗಾಗಲೇ ಆಶ್ವಾಸನೆ ನೀಡಿರುವಂತೆ ಮುಂದಿನ ಶೈಕ್ಷಣಿಕ ವರ್ಷದಿಂದ ವಚನ ವಿಶ್ವವಿದ್ಯಾಲಯವನ್ನು ಆರಂಭಿಸಬೇಕು.
- ರಾಜ್ಯದ ಎಲ್ಲ ಸರ್ಕಾರಿ ಮತ್ತು ಖಾಸಗಿ ಕೈಗಾರಿಕೆಗಳು, ಕಛೇರಿಗಳು, ಅಂಗಡಿ ಮುಂಗಟ್ಟುಗಳ ನಾಮಫಲಕಗಳು ಕನ್ನಡದಲ್ಲಿರುವುದು ಕಡ್ಡಾಯವಾಗಬೇಕು, ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು.
- ಪರಿಸರದ, ವಿಶೇಷವಾಗಿ, ಪಶ್ಚಿಮಘಟ್ಟಗಳ ರಕ್ಷಣೆಗೆ ಕಟ್ಟುನಿಟ್ಟಾದ ಕ್ರಮಕೈಗೊಳ್ಳಬೇಕು. ಅಲ್ಲಿ ಗಣಿಗಾರಿಕೆಗೆ ಅವಕಾಶ ನೀಡಬಾರದು.
- ಹಿರಿಯ ಸಾಹಿತಿಗಳ ಸಮಗ್ರ ಸಾಹಿತ್ಯ ಪ್ರಕಟಣೆ ಒಂದು ಒಳ್ಳೆಯ ಯೋಜನೆಯಾಗಿದ್ದು, ಅದನ್ನು ಮುಂದುವರೆಸಿಕೊಂಡು ಹೋಗಬೇಕು.
- ಆಡಳಿತದಲ್ಲಿ ಕನ್ನಡ ಬಳಕೆಯ ಬಗ್ಗೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳಬೇಕು. ಮುಖ್ಯವಾಗಿ ಕನ್ನಡ ಲಿಪಿಯನ್ನು ಆಧುನಿಕ ತಂತ್ರಜ್ಞಾನ ವಿಧಾನಗಳಿಗೆ ಹೊಂದಿಸುವ ಕೆಲಸ ತ್ವರಿತವಾಗಿ ನಡೆಯಬೇಕು. ಯಾಂತ್ರಿಕ ಬುದ್ಧಿಮತ್ತೆ ತಂತ್ರದ ಬಳಕೆ ಹೆಚ್ಚಾಗಬೇಕು.
- ಸಾಹಿತ್ಯ-ಸಂಸ್ಕೃತಿ ಸಂಬಂಧದ ಸಂಘ-ಸಂಸ್ಥೆಗಳಿಗೆ ಉದಾರ ಧನ ಸಹಾಯ ದೊರಕಿಸಬೇಕು.
- ಯಾವುದೇ ಕಾರಣಕ್ಕೆ ಪ್ರಾದೇಶಿಕ ಭಾಷೆಗಳ ಮೇಲೆ ಹಿಂದಿ ಹೇರಿಕೆಗೆ ಅವಕಾಶ ಕೊಡಬಾರದು.
- ಕನ್ನಡದ ಕೃತಿಗಳನ್ನು ಅನ್ಯಭಾಷೆಗೆ ಅನುವಾದಿಸಿ ಪ್ರಕಟಿಸುವ ಕೆಲಸ ದೊಡ್ಡ ಪ್ರಮಾಣದಲ್ಲಿ ನಡೆಯಬೇಕು. ಇದಕ್ಕಾಗಿ ಭಾಷಾ ಪ್ರಾಧಿಕಾರಕ್ಕೆ ಅಗತ್ಯ ನೆರವು ಒದಗಿಸಬೇಕು.
- ಕನ್ನಡ ಸಾಹಿತ್ಯ ಪರಿಷತ್ತು ಒಂದು ಪ್ರಾತಿನಿಧಿಕ ಸಂಸ್ಥೆಯಾಗಿದ್ದು, ಅದು ನಡೆಸುವ ಇಂತಹ ಸಮ್ಮೇಳನಗಳಲ್ಲಿ ಕೈಗೊಳ್ಳುವ ನಿರ್ಣಯಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ವಿಳಂಬ ಮಾಡದೆ ಅದನ್ನು ಅನುಷ್ಠಾನಗೊಳಿಸಬೇಕು.
- ಕನ್ನಡ ಸಾಹಿತ್ಯ ಪರಿಷತ್ತು ಶಾಲಾ ಶಿಕ್ಷಕರಿಗೆ ಸಾಹಿತ್ಯ-ಸಂಸ್ಕೃತಿಗಳ ಬಗೆಗೆ ನಿಯತಕಾಲಿಕ ಶಿಬಿರಗಳನ್ನು ನಡೆಸಿ, ಅವರಲ್ಲಿ ಸಾಹಿತ್ಯದ ಅಧ್ಯಯನಾಸಕ್ತಿ ಬೆಳೆಸಬೇಕು.

# ಬಳ್ಳಾರಿ (ಆರ್‌ಬಿಕೆವಿ) ಹಾಲು ಒಕ್ಕೂಟದಲ್ಲಿ ಮೆಗಾ ಡೈರಿ ನಿರ್ಮಾಣ – ಸಚಿವ ಕೆ.ಎನ್. ರಾಜಣ್ಣ

**ಬೆಳಗಾವಿ :** ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲಾ ಹಾಲು ಒಕ್ಕೂಟದಿಂದ ಕೊಳಗಲ್ಲು ಬಳಿ 15 ಎಕರೆ ಭೂಮಿಯನ್ನು ಜಿಲ್ಲಾಡಳಿತದಿಂದ ಪಡೆದು, ರೂ. 80 ಕೋಟಿ ರೂಪಾಯಿ ವೆಚ್ಚದಲ್ಲಿ ಮೆಗಾಡೈರಿ ನಿರ್ಮಾಣಕ್ಕೆ ಯೋಜಿಸಲಾಗುತ್ತಿದೆ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ರವರು ಸ್ಪಷ್ಟಪಡಿಸಿದ್ದಾರೆ.

ಜಿಲ್ಲಾಡಳಿತಕ್ಕೆ ರೂ. 2,92,01,070 ರೂಪಾಯಿ ಪಾವತಿಸಿ, ಕೊಳಗಲ್ಲು ಗ್ರಾಮದ ಸರ್ವೇ ನಂ. 139/ಬಿ ರಲ್ಲಿ 15 ಎಕರೆ ಭೂಮಿ ಖರೀದಿ ಮಾಡಿ ಕೆಎಂಇಆರ್‌ಸಿ ಬಿಡುಗಡೆ ಮಾಡಿರುವ ರೂ. 80 ಕೋಟಿ ಅನುದಾನದಿಂದ ಮೆಗಾಡೈರಿ ನಿರ್ಮಾಣಕ್ಕೆ ಅಗತ್ಯ ಕ್ರಮಕೈಗೊಳ್ಳಲು ಯಾವುದೇ ಅಭ್ಯಂತರಗಳಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ವಿಧಾನಪರಿಷತ್ತಿನಲ್ಲಿ ಬಳ್ಳಾರಿ–ವಿಜಯನಗರ ಜಿಲ್ಲೆಯ ಸ್ಥಳೀಯ ಸಂಸ್ಥೆಗಳ ಪ್ರತಿನಿಧಿ ವೈ.ಎಂ. ಸತೀಶ್ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವ ಕೆ.ಎನ್. ರಾಜಣ್ಣ ಅವರು, ನಿರ್ದೇಶಕರ ಸಂಖ್ಯೆ ಹೆಚ್ಚಳದ ವಿವಾದ ನ್ಯಾಯಾಲಯದಲ್ಲಿದೆ. ಆದರೆ, ಹೊಸ ಆಡಳಿತ ಮಂಡಳಿ ಅಧಿಕಾರಕ್ಕೆ ಬರುವವರೆಗೂ ಹಾಲಿ ಆಡಳಿತ ಮಂಡಳಿಯೇ ಅಧಿಕಾರದಲ್ಲಿರುತ್ತದೆ ಎಂದು ಉತ್ತರಿಸಿದ್ದಾರೆ.



# ಸಹಕಾರ ಸಚಿವರಿಂದ ಇಲಾಖಾ ಪ್ರಗತಿ ಪರಿಶೀಲನೆ



**ಬೆಂಗಳೂರು:** ಸಹಕಾರ ಸಚಿವರಾದ ಕೆ.ಎನ್. ರಾಜಣ್ಣ ರವರು ಡಿಸೆಂಬರ್ 23 ರಂದು ಸಹಕಾರ ಸಂಘಗಳ ನಿಬಂಧಕರ ಕಚೇರಿಗೆ ಭೇಟಿ ನೀಡಿ, ಇಲಾಖಾ ಪ್ರಗತಿ ಪರಿಶೀಲನೆ ನಡೆಸಿದರು. ಸಹಕಾರ ಸಂಘಗಳ ನಿಬಂಧಕರ ಕಚೇರಿಯ ಆವರಣದಲ್ಲಿ ನಿರ್ಮಾಣ ಮಾಡಲಾಗುತ್ತಿರುವ ನೂತನ ಸಹಕಾರ ಸೌಧದ ಪ್ರಗತಿಯನ್ನು ಪರಿಶೀಲಿಸಿ, ಉಪಯುಕ್ತ ಮಾರ್ಗದರ್ಶನ ನೀಡಿದರು. ಸಭೆಯಲ್ಲಿ ಸಹಕಾರ ಇಲಾಖೆ ಕಾರ್ಯದರ್ಶಿ ಡಾ. ಎಂ.ಎನ್. ಅಜಯ್ ನಾಗಭೂಷಣ್, ಸಹಕಾರ ಸಚಿವರ ವಿಶೇಷಾಧಿಕಾರಿ ಜಿ.ಎಸ್. ರಮಣರೆಡ್ಡಿ, ಅಪರ ನಿಬಂಧಕರುಗಳಾದ ಎ.ಸಿ. ದಿವಾಕರ್, ಕೆ.ಎಸ್. ನವೀನ್, ಬಿ.ಎಸ್. ಲಿಂಗರಾಜು ಅವರು ಸೇರಿದಂತೆ ಜಂಟಿ ನಿಬಂಧಕರುಗಳು ಉಪಸ್ಥಿತರಿದ್ದರು.

# ಭಾರತದ 76ನೇ ಗಣರಾಜ್ಯೋತ್ಸವ : ಜಗತ್ತಿಗೆ ಭಾರತದ ವಿರಾಟ ಶಕ್ತಿಯ ಪ್ರದರ್ಶನ



2025 ಗಣರಾಜ್ಯೋತ್ಸವ ಆಚರಣೆ, ಸರ್ವತಂತ್ರ ಸಾರ್ವಭೌಮ ಭಾರತದ ಸ್ವಾತಂತ್ರ್ಯ ನಂತರ ಸಾಧಿಸಿದ ಸಾಧನೆಯ ಅನಾವರಣ.

ದೇಶದ ಪ್ರತಿಯೊಬ್ಬ ಪ್ರಜೆಯೂ ದೇಶ ಸರ್ವತೋಮುಖ ಅಭಿವೃದ್ಧಿಗೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ತನ್ನದೆ ಆದ ಕೊಡುಗೆ ನೀಡುತ್ತಾ ಬಂದಿದ್ದಾನೆ. ಜಗತ್ತಿನ ನಾದ್ಯಂತ ಯುದ್ದದ ಕಾರ್ಮೋಡ ವ್ಯಾಪಿಸಿರುವಾಗ ಭಾರತ ದೇಶ ಯುದ್ದೋನ್ಮಾದದಿಂದ ದೂರ ಉಳಿದರಿರುವುದು ಸಮಾಧಾನ ಪಡುವ ವಿಷಯವಾಗಿದೆ. ಆದರೂ ಜಗತ್ತಿನ ಯಾವುದೇ ಮೂಲೆಯಲ್ಲಿ ಯುದ್ದ ನಡೆದರೂ ಅದರ ಅಡ್ಡ ಪರಿಣಾಮ ದೇಶ ಎದುರಿಸಬೇಕಾಗುತ್ತದೆ.

ಮೂರು ವರ್ಷಗಳಿಂದ ನಡೆಯುತ್ತಿರುವ ರಷ್ಯಾ–ಉಕ್ರೇನ್ ಯುದ್ದ ಹಾಗೂ ಕಳೆದ ಒಂದು ವರ್ಷಗಳಿಗಿಂತ ಹೆಚ್ಚು ಕಾಲದಿಂದ ನಡೆಯುತ್ತಿರುವ ಇಸ್ರೇಲ್–ಪ್ಯಾಲೆಸ್ಟೈನ್ ನಡುವಿನ ಕದನದ ಅಡ್ಡ ಪರಿಣಾಮಗಳು ಭಾರತದ ಮೇಲೆ ಆಗಿದೆ. ಇದೆಲ್ಲದರ ನಡುವೆ ದೇಶ ತನ್ನದೇ ಆದ ಸ್ವಂತ ಪಥದಲ್ಲಿ ಸಾಗುತ್ತಿರುವುದು ದೇಶದ ಜನತೆ ನೆಮ್ಮದಿಯ ನಿಟ್ಟುಸಿರು ಬಿಡುವಂತೆ ಮಾಡಿದೆ.

ಭಾರತದ ನೆರೆಹೊರೆಯ ಪಾಕಿಸ್ತಾನ, ಬಾಂಗ್ಲಾದೇಶ, ಶ್ರೀಲಂಕಾ, ಮಾಲ್ಡೀವ್ಸ್, ಮ್ಯಾನ್ಮಾರ್ ದೇಶಗಳಲ್ಲಿ ನಡೆಯುತ್ತಿರುವ ಆಂತರಿಕ ಕಲಹಗಳನ್ನು ಭಾರತವು ಎಚ್ಚರದಿಂದ ಗಮನಿಸುತ್ತಿದೆ.

ವಿವಿಧ ಭಾಷೆ, ಮತ, ಪಂಥ ಆಚಾರ, ವಿಚಾರ, ಕಲೆ, ಸಂಸ್ಕೃತಿ, ಸಾಹಿತ್ಯ ಸಂಗೀತ, ಜಾನಪದ ಜೊತೆಗೆ ವೈವಿಧ್ಯಮಯ ನಂಬಿಕೆಗಳ ನಡುವೆಯೂ ಏಕತೆಯನ್ನು ಸಾಧಿಸಿ ರಾಜ್ಯಗಳ ಒಕ್ಕೂಟಕ ವ್ಯವಸ್ಥೆಯಲ್ಲಿರುವ ಭಾರತ ದೇಶವನ್ನು ಡಾ ಬಾಬಾಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನದಿಂದ ಏಕತೆ, ಸಮಗ್ರತೆ ಸಾಧಿಸಿ ಪ್ರಗತಿಯತ ದಾಪುಗಾಲುಹಾಕುತ್ತಿದೆ.

ವಿಜ್ಞಾನ, ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ಜಗತ್ತು ನಿಬ್ಬೇರಗಾಗುವಂತಹ ಮಹತ್ವದ ಸಾಧನೆ ಮಾಡುತ್ತಿದ್ದು. ಈ ಸಂದರ್ಭದಲ್ಲಿ 76 ನೇ ಗಣರಾಜೋತ್ಸವ ಆಚರಣೆ ಸಂಭ್ರಮ ಇನ್ನಷ್ಟೂ ಅರ್ಥ ಪೂರ್ಣಗೊಳಿಸುವುದರ ಜೊತೆಗೆ ದೇಶದ ಸಾಧನೆ ಬಗ್ಗೆ ಜನತೆ ಹೆಮ್ಮೆ ಪಡುವಂತೆ ಮಾಡಿದೆ. ಜಗತ್ತಿನ ಬೃಹತ್ ಪ್ರಜಾಪ್ರಭುತ್ವ ದೇಶ ಎಂಬ ಹೆಗ್ಗಳಿಕೆ ಗಳಿಸಿರುವ ಭಾರತದ ದಿನೇ ದಿನೇ ಅಭಿವೃದ್ಧಿ ಪಥದಲ್ಲಿ ದಾಪುಗಾಲು ಇಡುತ್ತಿರುವುದು ಸಂತಸ ವಿಷಯ.



140 ಕೋಟಿ ಗಿಂತ ಅಧಿಕ ಜನಸಂಖ್ಯೆ ಹೊಂದಿರುವ ಭಾರತ ಬಾಹ್ಯಾಕಾಶ, ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ಸಂಶೋಧನೆ, ಶಿಕ್ಷಣ, ಕೃಷಿ ಸಹಿತ ನಾನಾ ಕ್ಷೇತ್ರಗಳಲ್ಲಿ ಮಹತ್ವದ ಸಾಧನೆ ಮಾಡಿದ್ದು ಐದು ಟ್ರಿಲಿಯನ್ ಡಾಲರ್ ಆರ್ಥಿಕ ಶಕ್ತಿಯಾಗುವ ದಿಕ್ಕಿನಲ್ಲಿ ದಾಪುಗಾಲು ಹಾಕುವ ಮೂಲಕ ವಿಶ್ವದ ಬೃಹತ್ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲು ಸಜ್ಜಾಗಿದೆ. ಅತ್ಯಂತ ದೊಡ್ಡ ಸಂಖ್ಯೆಯ ವಿದ್ಯಾವಂತ ಯುವ ಸಮುದಾಯ ಹೊಂದಿರುವುದು ಭಾರತದ ಆರ್ಥಿಕ, ಶೈಕ್ಷಣಿಕ, ವೈಜ್ಞಾನಿಕ ಪ್ರಗತಿಗೆ ಸಹಕಾರಿಯಾಗಿದೆ.

ಆದರೂ ಭಾರತದಲ್ಲಿ ಜಾತಿ, ಮತ, ಧರ್ಮ ಭಾಷೆಗಳ ಹಸರಿನಲ್ಲಿ ನಡೆಯುತ್ತಿರುವ ಸಂಘರ್ಷಗಳು ಆರ್ಥಿಕ ಬೆಳವಣಿಗೆ ವೇಗಕ್ಕೆ ಕಡಿವಾಣ ಹಾಕುತ್ತಿರುವುದು ದೇಶದ ಪ್ರಗತಿಗೆ ದೊಡ್ಡ ಹಿನ್ನಡೆಯಾಗಿದೆ.

ದೇಶವು 1947ರಲ್ಲಿ ಬ್ರಿಟಿಷರಿಂದ ಸ್ವಾತಂತ್ರ್ಯ ಪಡೆದುಕೊಂಡಿತು. ಆದರೆ ಮೂರು ವರ್ಷಗಳ ನಂತರ ಅಂದರೆ ಜನವರಿ 26, 1950ರಂದು ಭಾರತದಲ್ಲಿ ಸಂವಿಧಾನ ಜಾರಿಗೆ ಬಂದಿತು. ಈ ಕಾರಣದಿಂದಾಗಿ, ಪ್ರತಿ ವರ್ಷ ಜನವರಿ 26ರಂದು ಗಣರಾಜ್ಯೋತ್ಸವವನ್ನು ಆಚರಣೆ ಮಾಡಿಕೊಂಡು ಬರಲಾಗುತ್ತಿದೆ.

ಡಾ. ಬಾಬಾಸಾಹೇಬ್ ಭೀಮರಾವ್ ಅಂಬೇಡ್ಕರ್ ಅವರು ಸಂವಿಧಾನದ ಕರಡು ಸಮಿತಿಯ ಅಧ್ಯಕ್ಷರಾಗಿದ್ದರು. ನವೆಂಬರ್ 26, 1949ರಂದು "ಭಾರತ ಸಂವಿಧಾನ"ವನ್ನು "ಭಾರತದ ಸಂವಿಧಾನ ಸಭೆ"ಯು ಅಂಗೀಕರಿಸಿದ ಕಾರಣ ದೇಶದಲ್ಲಿ ಪ್ರತಿ ವರ್ಷ ನವೆಂಬರ್ 26ರಂದು "ಸಂವಿಧಾನ ದಿನ"ವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಭಾರತದ ಸಂವಿಧಾನವನ್ನು ರಚಿಸುವ ಉದ್ದೇಶವನ್ನು ಹೊಂದಿದ್ದ ಸಂವಿಧಾನ ಸಭೆಯು ತನ್ನ ಮೊದಲ ಸಭೆಯನ್ನು ಡಿಸೆಂಬರ್ 9, 1946 ರಂದು ನಡೆಸಿತು. ಕೊನೆಯ ಸಭೆ ನವೆಂಬರ್ 26, 1949ರಂದು ಕೊನೆಗೊಂಡಿತು. ಒಂದು ವರ್ಷದ ತರುವಾಯ ಸಂವಿಧಾನ ಅಂಗೀಕಾರ ಮಾಡಲಾಯಿತು. ಡಾ. ಬಾಬಾ ಸಾಹೇಬ್ ಅವರ ಸಂವಿಧಾನವು ಸಾವಿರಾರು ವರ್ಷಗಳಿಂದ ದೈನೇಸಿ ಸ್ಥಿತಿಯಲ್ಲಿ ಪ್ರಾಣಿಗಳಿಗಿಂತ ಕಡೆಯಾಗಿ ಜೀವನ ಸಾಗಿಸುತ್ತಿದ್ದ ದೇಶದ ಬಹುಸಂಖ್ಯಾತ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ಸಮುದಾಯ ಹಾಗೂ ಅಲ್ಪಸಂಖ್ಯಾತರು ಶಿಕ್ಷಣ ಪಡೆದು ಸಮಾಜದಲ್ಲಿ ಘನತೆ ಹಾಗೂ ಆತ್ಮ ಗೌರವದ ಬದುಕು ಕಟ್ಟಿಕೊಳ್ಳಲು ನೆರವಾಯಿತು.

ಸಂವಿಧಾನ ಉಳಿದರೆ ಮಾತ್ರ ಅಖಂಡ ಭಾರತ ಉಳಿಯುತ್ತದೆ ಆ ಹಿನ್ನಲೆಯಲ್ಲಿ ಸಂವಿಧಾನದ ಕುರಿತು ಮುಂದಿನ ಪೀಳಿಗೆಯವರಿಗೆ ಜಾಗೃತಿ ಮೂಡಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರ ವಿಶೇಷ ಕಾರ್ಯಕ್ರಮ ಹಮ್ಮಿ ಕೊಂಡಿದ್ದು, ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳು ಸಂವಿಧಾನ ಪೀಠಿಕೆ ಓದುವಂತೆ ಆದೇಶ ಹೊರಡಿಸಿದೆ.




ಈ ಹಿನ್ನಲೆಯಲ್ಲಿ ಸಂವಿಧಾನ ಪೀಠಿಕೆ ಓದು ಎನ್ನುವ ಕಾರ್ಯಕ್ರಮವನ್ನು ರಾಜ್ಯಾದ್ಯಂತ ನಡೆಸಲಾಯಿತು. ಗಣರಾಜ್ಯೋತ್ಸವವು "ಸ್ವತಂತ್ರ ಭಾರತದ ಆತ್ಮದ ಸಂಕೇತ"ವಾಗಿದೆ. 1930ರಲ್ಲಿ ಈ ದಿನದಂದು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ "ಪೂರ್ಣ ಸ್ವರಾಜ್" ಎಂದು ಘೋಷಿಸಿತು. ಈ ದಿನವು ಭಾರತೀಯರಿಗೆ ತಮ್ಮ ಸರ್ಕಾರವನ್ನು "ಪ್ರಜಾಸತ್ತಾತ್ಮಕವಾಗಿ ಆಯ್ಕೆ ಮಾಡುವ ಶಕ್ತಿ"ಯನ್ನು ನೆನಪಿಸಿಕೊಡುತ್ತದೆ.

ಜನವರಿ 26ರ ದಿನದ ಪ್ರಮುಖ ಆಕರ್ಷಣೆಯೆಂದರೆ ಪರೇಡ್. ಇದು ದೆಹಲಿಯ ರಾಜಪಥದಿಂದ ಪ್ರಾರಂಭವಾಗಿ ಇಂಡಿಯಾ ಗೇಟ್ ವರೆಗೆ ಸೇನೆ ತನ್ನ ಶಕ್ತಿ ಪ್ರದರ್ಶನ ತೋರಿಸುತ್ತದೆ. ಗಣರಾಜ್ಯೋತ್ಸವ ಪಥ ಸಂಚಲನದಲ್ಲಿ ಭಾರತದ ರಕ್ಷಣಾ ಪಡೆಗಳ ಬೃಹತ್ ಶಕ್ತಿಯ ಪ್ರದರ್ಶನ ನೋಡುವುದೇ ಕಣ್ಣಿಗೆ ಹಬ್ಬ. ಇದರೊಂದಿಗೆ ಮಿಲಿಟರಿ ಬ್ಯಾಂಡ್‌ಗಳು ಮತ್ತು ವಿವಿಧ ರಾಜ್ಯಗಳ, ಇಲಾಖೆಗಳ ಮತ್ತು ಸಶಸ್ತ್ರ ಪಡೆಗಳ ಸ್ತಬ್ಧ ಚಿತ್ರಗಳು ಪ್ರಮುಖ ಆಕರ್ಷಣೆ. ಕಳೆದ ವರ್ಷದ ಗಣರಾಜ್ಯೋತ್ಸವ ಪರೇಡ್ ನಲ್ಲಿ ಕರ್ನಾಟಕ ರಾಜ್ಯ ಸ್ಥಬ್ದಚಿತ್ರಕ್ಕೆ ಅವಕಾಶ ಸಿಗದೆ ಇರುವುದರಿಂದ ಕನ್ನಡಿಗರಲ್ಲಿ ಅಸಮಾಧಾನ ಮೂಡುವಂತೆ ಮಾಡಿತು. ಇದು ರಾಜಕೀಯ ಕೆಸರೆರೆಚಾಟಕ್ಕೆ ಕಾರಣವಾಗಿತು. ಆದರೆ ಈ ಬಾರಿಯ ಗಣರಾಜ್ಯೋತ್ಸವ ಪರೇಡ್ ನಲ್ಲಿ ಕರ್ನಾಟಕದ ಸ್ಥಬ್ದ ಚಿತ್ರ ಪ್ರದರ್ಶನಕ್ಕೆ ಅವಕಾಶ ಸಿಕ್ಕಿರುವುದು ಕನ್ನಡಿಗರ ಹೆಮ್ಮೆ ಪಡುವಂತೆ ಮಾಡಿದೆ. ಭಾರತೀಯ ಸೇನೆ, ನೌಕಾಪಡೆ ಮತ್ತು ವಾಯುಪಡೆ ವಿಶೇಷ ಪಥ ಸಂಚಲನ ಹಾಗೂ ಭಾರತದ ಸಾಂಸ್ಕೃತಿಕ ಮತ್ತು ಸಾಮಾಜಿಕ ಪರಂಪರೆಯನ್ನು ಪ್ರದರ್ಶಿಸುವ ಕಾರ್ಯಕ್ರಮಗಳ ಜೊತೆಗೆ ವಿವಿಧ ರಾಜ್ಯಗಳ ಕಲೆ, ಸಂಸ್ಕೃತಿ, ಆಚಾರ, ವಿಚಾರ ಬಿಂಬಿಸುವ ಸ್ತಬ್ಧಚಿತ್ರಗಳು ರಾಜಪಥದಲ್ಲಿ ಕಾಣಿಸಿಕೊಳ್ಳುತ್ತವೆ.

ಭಾರತದ ಗಣರಾಜ್ಯೋತ್ಸವ ಆಚರಣೆ ಅಂದರೆ ದೇಶವು ವಿವಿಧತೆಯಲ್ಲಿ ಏಕತೆ ಸಾಧಿಸಿದ ಪರಿಯನ್ನು ದೇಶ ವಿದೇಶಗಳ ಕೋಟ್ಯಾಂತರ ಜನ ಕಣ್ತುಂಬಿ ಕೊಳ್ಳುವ ಮೂಲಕ ವಿಶ್ವ ಮಾನವ ಸಂದೇಶವನ್ನು ಜಗತ್ತಿನಾದ್ಯಂತ ಹರಡಲು ಸಹಕಾರಿಯಾಗಲಿದೆ.

**– ಮಂಜುನಾಥ್ ನಾಯ್ಕ್**
**ಹಿರಿಯ ಪತ್ರಕರ್ತರು, ಬೆಂಗಳೂರು.**



## ತುಮಕೂರಿನಲ್ಲಿ ಸಹಕಾರ ರತ್ನ ಪ್ರಶಸ್ತಿ ಪ್ರದಾನ

## ರೈತರ ಸ್ವಾಭಿಮಾನ, ಸ್ವಾವಲಂಬಿ ಬದುಕಿಗೆ ಸಹಕಾರ ವಲಯ ಪೂರಕ

## ರಾಜ್ಯದ ಸಹಕಾರ ವಲಯದ ಬೆಳವಣಿಗೆ ಶ್ಲಾಘನೀಯ : ಡಾ. ಜಿ. ಪರಮೇಶ್ವರ್

**ತುಮಕೂರು :** ಭಾರತದ ಸಹಕಾರಿ ಕ್ಷೇತ್ರದ ಬೆಳವಣಿಗೆ ಇಡೀ ವಿಶ್ವಕ್ಕೆ ಮಾದರಿಯಾಗಿದೆ. ಗ್ರಾಮೀಣ ಆರ್ಥಿಕ ವ್ಯವಸ್ಥೆಯ ಜೀವನಾಡಿಯಾಗಿ ಸಹಕಾರ ಸಂಘಗಳು ರೈತರ ಸ್ವಾವಲಂಬಿ ಬದುಕಿಗೆ ಪೂರಕವಾಗಿ ಸೇವೆ ಸಲ್ಲಿಸುತ್ತಿವೆ ಎಂದು ಗೃಹ ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಜಿ. ಪರಮೇಶ್ವರ್ ತಿಳಿಸಿದರು.

ನಗರದ ಹೆಗ್ಗೆರೆಯ ಶಿಕ್ಷಣ ಭೀಷ್ಮ ಹೆಚ್.ಎಂ. ಗಂಗಾಧರಯ್ಯ ಸ್ಮಾರಕ ಭವನದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ತುಮಕೂರು ಜಿಲ್ಲಾ ಸಹಕಾರ ಯೂನಿಯನ್ ಹಾಗೂ ತುಮಕೂರು ಹಾಲು ಒಕ್ಕೂಟ ಇವರುಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ "ಸಹಕಾರ ರತ್ನ" ಪ್ರಶಸ್ತಿ ಪ್ರದಾನ ಮತ್ತು ಹಾಲು ಉತ್ಪಾದಕರ ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಹಾಲು ಪರೀಕ್ಷೆ ಕುರಿತು ಹೊಸ ತಂತ್ರಾಂಶ ಅವಳಡಿಕೆ ಬಗ್ಗೆ ಏರ್ಪಡಿಸಲಾಗಿದ್ದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

1905ರಲ್ಲಿ ಪ್ರಾರಂಭವಾದ ಈ ಸಹಕಾರ ಆಂದೋಲನ ಇಂದು ಬೃಹತ್ ಆಂದೋಲನವಾಗಿ ಬೆಳೆದು ರಾಷ್ಟ್ರದಲ್ಲಿ 8.50 ಲಕ್ಷ ಸಹಕಾರಿ ಸಂಘಗಳು, 30 ಕೋಟಿ ಸದಸ್ಯ ಬಳಗವನ್ನೊಂದಿದೆ. ಈ ಸಂದರ್ಭದಲ್ಲಿ ಭಾರತದಲ್ಲಿ ಆಂದೋಲನ ಪ್ರವರ್ಧಮಾನಕ್ಕೆ ಬರಲು ಕಾರಣೀಭೂತರಾದ ಮಹಾತ್ಮ ಗಾಂಧೀಜಿ, ಪಂಡಿತ್ ನೆಹರು, ವರ್ಗೀಸ್ ಕುರಿಯನ್ ಅವರುಗಳನ್ನು ಸ್ಮರಿಸಬೇಕಿದೆ ಎಂದರು.

ಕರ್ನಾಟಕದ ಕೆ.ಎಂ.ಎಫ್ ದೇಶದಲ್ಲಿಯೇ 2ನೇ ಸ್ಥಾನದಲ್ಲಿದ್ದು, ಹಾಲು ಉತ್ಪಾದಕ ಸಹಕಾರ ಸಂಘಗಳು ಗ್ರಾಮೀಣ ಜನರ ಜೀವಾಳವಾಗಿವೆ. ಸಹಕಾರಿ ಸಂಘಗಳು ಕೃಷಿ, ಹೈನುಗಾರಿಕೆಗೆ ಸೀಮಿತವಾಗದೆ ಕೈಗಾರಿಕೆ, ಶಿಕ್ಷಣ, ಬ್ಯಾಂಕಿಂಗ್ ಹೀಗೆ ಎಲ್ಲ ಕ್ಷೇತ್ರವನ್ನು ಆವರಿಸಿರುವುದು ಸಹಕಾರ ಕ್ಷೇತ್ರದ ಯಶಸ್ಸಿನ ಸಂಕೇತವಾಗಿದೆ ಎಂದರು.

ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಜಿ.ಟಿ. ದೇವೇಗೌಡರು ಸಹಕಾರ ವಾರಪತ್ರಿಕೆಯ ವಿಶೇಷ ಸಂಚಿಕೆ ಬಿಡುಗಡೆ ಮಾಡಿ ಮಾತನಾಡುತ್ತಾ, ದೇಶದಲ್ಲಿ ಉದಾರೀಕರಣ, ಖಾಸಗೀಕರಣ, ಜಾಗತೀಕರಣ ಜಾರಿಯಾಗುವವರೆಗೂ ಜನರಿಗೆ ಬೇಕಾದ ಆಹಾರ ಪದಾರ್ಥ, ಬಟ್ಟೆ ಇನ್ನಿತರ ವಸ್ತುಗಳನ್ನು ಸಹಕಾರ ಸಂಘಗಳ ಮೂಲಕವೇ ಪೂರೈಕೆ ಮಾಡಲಾಗುತ್ತಿತ್ತು. ಆದರೆ, ಗ್ಯಾಟ್

15ನೇ ಪುಟಕ್ಕೆ...

# ಸಡಗರ ಸಂಭ್ರಮದಿಂದ ವರ್ಷದ ಮೊದಲ ಹಬ್ಬ ಸಂಕ್ರಾಂತಿ ಆಚರಣೆ

**ಕಳೆದ ವರ್ಷ ರಾಜ್ಯಾದ್ಯಂತ ಭೀಕರ ಬರ ಬಂದು ರೈತರು ಜನಸಾಮಾನ್ಯರು ತತ್ತರಿಸಿದರೆ. ಈ ವರ್ಷ ಅತಿವೃಷ್ಟಿಯಿಂದ ಬೆಳೆದ ಬೆಳೆ ಕೈ ಬರದೆ ರೈತರು ಕಂಗಾಲಾಗಿದ್ದಾರೆ. ಅತಿವೃಷ್ಟಿ, ಅನಾವೃಷ್ಟಿ ಸಂಭವಿಸದರೆ ಮೊದಲ ಬಲಿಪಶುವಾಗುವುದೆ ಮಣ್ಣಿನ ಮಕ್ಕಳಾದ ರೈತರು. ಇಂತಹ ನೂರಾರು ಕಷ್ಟಗಳನ್ನು ಸಹಿಕೊಂಡು ನಮಗೆ ಅನ್ನ ನೀಡುವ ರೈತ ಸಮುದಾಯ ಸದಾಕಾಲವೂ ಬಡತನದಲ್ಲಿಯೇ ದಿನಕಳೆಯುವಂತಾಗಿ. ಈ ಸಂಕಷ್ಟಗಳ ನಡುವೆ ಹಬ್ಬ ಹರಿದಿನಗಳು ಒಂದಾದಮೇಲೆ ಒಂದು ಬರುತ್ತಿರುತ್ತದೆ. ಅದೇ ಪ್ರಕಾರ ಸುಗ್ಗಿ ಹಬ್ಬ ಸಂಕ್ರಾಂತಿ ನಾಡಿನಾದ್ಯಂತ ಸಡಗರ ಸಂಭ್ರಮ ದಿಂದ ಆಚರಿಸಲಾಗುತ್ತದೆ. ವರ್ಷದ ಮೊದಲ ಹಬ್ಬ ಸಂಕ್ರಾತಿ ಎಂಬ ಹೆಗ್ಗಳಿಕೆಯಿಂದ ಅದನ್ನು ನಾಡಿನಾದ್ಯಂತ ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತದೆ.**

ರೈತರಿಗೂ ಸಂಕ್ರಾಂತಿ ಹಬ್ಬಕ್ಕೂ ನೇರ ಸಂಬಂಧವಿದೆ ಹೇಗೆಂದರೆ, ಸಂಕ್ರಾಂತಿ ಹಬ್ಬ ನಿಸರ್ಗದ ಹಬ್ಬ. ಮಾನವ ಹಾಗೂ ಪಶು, ಪಕ್ಷಿ, ಜಲಚರಗಳ, ಎಲ್ಲಾ ಬಯಕೆ ಹಾಗೂ ಅಗತ್ಯಗಳನ್ನು ಪೂರೈಸುವ ಪ್ರಕೃತಿ ಮಾತೆಗೆ ಪೂಜೆ ಸಲ್ಲಿಸುವುದೆ ಸಂಕ್ರಾಂತಿ ಹಬ್ಬದ ಮುಖ್ಯ ಆಶಯ. ಮಳೆ ಬೆಳೆ ಸರಿಯಾಗಿ ಬಂದರೆ ಹುರುಪು, ಹುಮ್ಮಸು, ಸಡಗರ ಸಂಭ್ರಮದಿಂದ ರೈತರು ಹಬ್ಬ ಆಚರಿಸುತ್ತಾರೆ. ಆದರೆ ಈ ವರ್ಷ ಅತಿವೃಷ್ಟಿಯಿಂದ ಬೆಳೆದ ಬೆಳೆ ಕೈಗೆ ಬರದೆ ರೈತರು ಸಂಕಷ್ಟ ಸ್ಥಿತಿ ಎದುರಿಸುವಂತಾಗಿದೆ.

ಅಗತ್ಯ ವಸ್ತಗಳ ಬೆಲೆ ಏರಿಕೆಯು ಹಬ್ಬದ ಸಂಭ್ರಮವನ್ನು ಕಡಿಮೆ ಮಾಡಿದೆ. ಸಂಕ್ರಾತಿ ಹಬ್ಬದಂದು ಸೂರ್ಯ ತನ್ನ ಪಥ ಬದಲಾಯಿಸವುದು ಪ್ರಕೃತಿಯಲ್ಲಿ ನಡೆಯುವ ಪ್ರಮುಖ ಘಟನೆಯಾಗಿದೆ. ಸೂರ್ಯನ ಪಥ ಬದಲಾವಣೆಯಿಂದ ಹಗಲು ದೊಡ್ಡದಾಗುತ್ತದೆ.

ಸಂಕ್ರಾಂತಿ ಹಬ್ಬ ಆಚರಣೆ ಸಮಯದಲ್ಲಿ ಎಳ್ಳಿನ ಜತೆಯಲ್ಲಿ ಬೆಲ್ಲ, ಕಡಲೆಬೀಜ, ಕೊಬ್ಬರಿಯನ್ನು ಮಿಶ್ರಣ ಮಾಡಿ ದಾನ ಮಾಡುವ ಪದ್ಧತಿ ಹಿಂದಿನಿಂದಲೂ ನಡೆದು. ಅಲ್ಲದೆ ಆ ಬೆಳೆಗಳು ಆಗ ತಾನೆ ಬೆಳೆದು ಮಾರುಕಟ್ಟೆಗೆ ಬಂದಿರುತ್ತದೆ. ಅವುಗಳನ್ನು ಪೂಜೆ ಮಾಡಿ



ದಾನ ಧರ್ಮ ಮಾಡಿದರೆ ಇನ್ನು ಫಲ ಹೆಚ್ಚು ಬರುವುದು ಎಂಬ ನಂಬಿಕೆಯೂ ಇದೆ.

ವೈಜ್ಞಾನಿಕ ರೀತಿಯಲ್ಲಿ ನೋಡಿದಾಗ ಸಂಕ್ರಾಂತಿಯ ಸಮಯದಲ್ಲಿ ಚಳಿ ಹೆಚ್ಚು ಇರುತ್ತದೆ. ಎಳ್ಳು ಸೇವನೆಯಿಂದ ದೇಹದ ಉಷ್ಣತೆ ಹೆಚ್ಚು ಆಗುತ್ತದೆ ಹಾಗೂ ಚರ್ಮದ ಕಾಂತಿಯೂ ಹೆಚ್ಚುತ್ತದೆ. ಈ ಹಬ್ಬವು ಅತ್ಯಂತ ಪ್ರಾಚೀನ ಕಾಲದಿಂದಲೂ ಆಚರಣೆಗೆ ಬಂದಿದೆ.

ಗ್ರಾಮೀಣ ಪ್ರದೇಶದಲ್ಲಿ ರೈತರು ಆ ದಿನ ಎತ್ತುಗಳಿಗೆ ಪೂಜೆ ಸಲ್ಲಿಸಿ ಕಿಚ್ಚು ಹಾಯಿಸುತ್ತಾರೆ. ಭಾರತದ ವಿವಿಧ ರಾಜ್ಯಗಳಲ್ಲಿ ಸಂಕ್ರಾತಿ ಹಬ್ಬ ವನ್ನು ವಿಭಿನ್ನ ಹೆಸರಿನಿಂದ ಆಚರಿಸಿ ಪ್ರಕೃತಿ ಗೋ ಮಾತೆಗೆ ಪೂಜಿಸುತ್ತಾರೆ. ಅದೇ ಪ್ರಕಾರ ಹೊರ ದೇಶದಲ್ಲೂ ವಿಭಿನ್ನ ರೀತಿಯಲ್ಲಿ ಈ ಹಬ್ಬವನ್ನು ಆಚರಿಸುತ್ತಾರೆ.

ಸಂಕ್ರಾಂತಿ ಹಬ್ಬದ ದಿನದಂದು ಎಳ್ಳು ಬೆಲ್ಲ(ಸಕ್ಕರೆ) ನೆಲಗಡಲೆ, ಸಕ್ಕರೆ ಅಚ್ಚು, ಕೊಬ್ಬರಿ, ಕಬ್ಬು ಬೆರೆಸಿದ ವಿಶೇಷ ಸಿಹಿಯನ್ನು ದೇವರಿಗೆ ನೈವೇದ್ಯ ಮಾಡಿ ನಂತರ ವಿವಾಹಿತ ಹಾಗೂ ಅವಿವಾಹಿತ ಹೆಣ್ಣು ಮಕ್ಕಳು ತಮ್ಮ ಆಪ್ತರೇಷ್ಟರಿಗೆ ಹಂಚಿ ಸಂತೋಷವನ್ನು ಪಡುತ್ತಾರೆ. ಈ ದಿನ ಶ್ರೀರಾಮನ ಪೂಜೆಯನ್ನು ಆಂಧ್ರಪ್ರದೇಶದಲ್ಲಿ ಮಾಡುತ್ತಾರೆ. ತಮಿಳುನಾಡಿನಲ್ಲಿ ಪೊಂಗಲ್ ಹೆಸರಿನಲ್ಲಿ ಸಂಕ್ರಾಂತಿ ಹಬ್ಬ ಅತ್ಯಂತ ಸಡಗರ, ಸಂಭ್ರಮದಿಂದ ಆಚರಿಸಲಾಗುತ್ತದೆ. ಪೊಂಗಲ್ ಹಬ್ಬಕ್ಕೆ ಬೆಲ್ಲ, ಅಕ್ಕಿ, ತುಪ್ಪದಿಂದ ತಯಾರಿಸಿದ ಪೊಂಗಲನ್ನು (ಅಕ್ಕಿಯ ಪಾಯಸ) ಸುತ್ತಲೂ ಕಬ್ಬನ್ನು ಕಟ್ಟಿ ಸಿಂಗರಿಸಿದ ಒಲೆಯಲ್ಲಿ ಮಾಡಿ ಹಬ್ಬವನ್ನು ಆಚರಿಸುತ್ತಾರೆ. ರೈತರು ಈ ದಿನದಂದು ಹಸುಗಳಿಗೆಗ ಮೈತೊಳೆದು, ಸಿಂಗರಿಸಿ ಮೆರವಣಿಗೆ ಮಾಡಿ, ಸಂಜೆ ಊರ ಒಂದು ಬೀದಿಯ ದಾರಿಯಲ್ಲಿ ಕಿಚ್ಚು ಹಾಯಿಸುತ್ತಾರೆ. ಎಳ್ಳಿನ ಹಬ್ಬವೆಂದು ಪ್ರಸಿದ್ಧವಾದ ಈ ದಿನದಂದು, ನಾನಾ ರೂಪಗಳಲ್ಲಿ ಎಳ್ಳನ್ನು ಬಳಸುತ್ತಾರೆ.

...13ನೇ ಪುಟದಿಂದ





ಒಪ್ಪಂದದ ಫಲವಾಗಿ ಬಹು ರಾಷ್ಟ್ರೀಯ ಕಂಪನಿಗಳ ಪ್ರವೇಶದಿಂದ ಸಹಕಾರ ಕ್ಷೇತ್ರ ಕೊಂಚ ಹಿನ್ನೆಡೆಯಾದರೂ ಇಂದಿಗೂ ಗಟ್ಟಿಯಾಗಿದೆ. ಗ್ರಾಮೀಣ ಭಾಗದ ಜನರು ಸಹಕಾರಿ ಸಂಘಗಳಲ್ಲಿ ಷೇರು ಬಂಡವಾಳ ಹೂಡಬೇಕು. ಹಣವನ್ನು ಅನಗತ್ಯವಾಗಿ, ಅದ್ದೂರಿ ಕಾರ್ಯಕ್ರಮಗಳಿಗೆ ಖರ್ಚು ಮಾಡುವ ಬದಲು, ಮಂತ್ರ ಮಾಂಗಲ್ಯದಂತಹ ಸರಳ ಮದುವೆಗಳಿಗೆ ಮುಂದಾಗುವಂತೆ ಕರೆ ನಿಡಿದರು.

ಭಾರತದ ಪ್ರಧಾನಿ ನೆಹರೂ ರವರು ಪಂಚವಾರ್ಷಿಕ ಯೋಜನೆಗಳ ಮೂಲಕ ಸಹಕಾರ ಕ್ಷೇತ್ರದ ಬಲವರ್ಧನೆಗೆ ವಿಶೇಷ ಆದ್ಯತೆ ನೀಡಿದ್ದರು. ವರ್ಗೀಸ್ ಕುರಿಯನ್, ಎಂ.ವಿ. ಕೃಷ್ಣಪ್ಪನವರುಗಳು ಕ್ಷೀರಕ್ರಾಂತಿಗೆ ಕಾರಣರಾದರು. ಹೀಗೆ ಮಹನೀಯರುಗಳ ಕೊಡುಗೆ ಇಂದು ಸಹಕಾರ ಕ್ಷೇತ್ರದ ಬಲವರ್ಧನೆಗೆ ಕಾರಣವಾಗಿದೆ ಎಂದರು.



ಐಟಿ ರಾಜಧಾನಿ ಬೆಂಗಳೂರು ಮಹಾನಗರದಲ್ಲೂ ಸುಗ್ಗಿ ಹಬ್ಬ ಸಂಕ್ರಾಂತಿಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತದೆ. ದೇವಸ್ಥಾನಗಳಲ್ಲಿ ನಡೆಯುವ ವಿಶೇಷ ಪೂಜೆಯಲ್ಲಿ ಸಾವಿರಾರು ಮಂದಿ ಭಾಗವಹಿಸುತ್ತಾರೆ. ಪೂಜೆಯ ನಂತರ ಪ್ರಸಾದ ವಿತರಿಸಲಾಗುತ್ತದೆ. ಬೆಂಗಳೂರು ನಗರದಲ್ಲೂ ಎತ್ತುಗಳಿಗೆ ಕಿಚ್ಚು ಹಾಯಿಸುವ ಕಾರ್ಯಕ್ರಮ ಪ್ರತಿವರ್ಷ ನಡೆಯುತ್ತದೆ.

ನಮ್ಮ ದೇಶದಲ್ಲಿ ಆಚರಿಸಲ್ಪಡುವ ಪ್ರತಿಯೊಂದು ಧರ್ಮದ ಹಬ್ಬಕ್ಕೂ ತನ್ನದೇ ಆದ ಐತಿಹಾಸಿಕ, ಪೌರಾಣಿಕ, ವೈಜ್ಞಾನಿಕ ಮಹತ್ವಗಳಿವೆ. ಆದರೆ ಇತ್ತೀಚಿನ ಒತ್ತಡದ ಜೀವನದಲ್ಲಿ ಹಬ್ಬಗಳ ಆಚರಣೆಯೇ ಕಣ್ಮರೆಯಾಗುತ್ತಿರುವುದು ವಿಪರ್ಯಾಸ. ನಮ್ಮ ಇಂದಿನ ಪೀಳಿಗೆಯವರಿಗೆ ಪಾಶ್ಚಾತ್ಯೀಕರಣದ ಪ್ರಭಾವದಿಂದ ನಮ್ಮ ಸಾಂಸ್ಕೃತಿಕ ದ್ಯೋತಕವಾದ ಹಬ್ಬಗಳು ಯಾವುದು ಎಂಬುದೇ ತಿಳಿಯದಂತಾಗಿದೆ. ಹೀಗಾಗಿ ಅನುಕರಣೆಯ ಜಾಡ್ಯವನ್ನು ತೊರೆದು ಪರಂಪರಾಗತವಾಗಿ ಆಚರಣೆಗೆ ಒಳಪಟ್ಟ ಹಬ್ಬ ಹರಿದಿನಗಳನ್ನು ಹಿರಿಯರು ಆಚರಿಸುತ್ತಾ ಮಕ್ಕಳಿಗೂ ಅದರ ಮಹತ್ವ, ಹಿನ್ನೆಲೆ ಬಗ್ಗೆ ತಿಳಿಸಿ, ಅದು ಮುಂದಿನ ಪೀಳಿಗೆಯವರೆಗೆ ಮುಂದುವರಿಯುವಂತೆ ಮಾಡುವುದು ಸತ್ಸಂಪ್ರದಾಯ.

**– ಸವಿತಾ ನಾಯ್ಕ್, ಬೆಂಗಳೂರು**

# ರಾಷ್ಟ್ರದ ಸಹಕಾರ ಚಳವಳಿಯ ಬೆಳವಣಿಗೆಯಲ್ಲಿ ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮದ ಪಾತ್ರ ನಿರ್ಣಾಯಕ : ಅಮಿತ್ ಶಾ

**ನವದೆಹಲಿ :** ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮವು (ಎನ್‌ಸಿಡಿಸಿ) ಸಹಕಾರ ಚಳವಳಿಯ ಬೆಳವಣಿಗೆಯಲ್ಲಿ ನಿರ್ಣಾಯಕ ಆರ್ಥಿಕ ನೆರವು ಮತ್ತು ಬೆಂಬಲವನ್ನು ನೀಡುವ ಮೂಲಕ ಭಾರತದ ಪ್ರಮುಖ ಸಂಸ್ಥೆಯಾಗಿ ಹೊರಹೊಮ್ಮಿದೆ ಎಂದು ಲೋಕಸಭೆಯಲ್ಲಿ ಕೇಳಿದ ಪ್ರಶ್ನೆಯೊಂದಕ್ಕೆ ಕೇಂದ್ರ ಸಹಕಾರ ಸಚಿವರಾದ ಅಮಿತ್ ಶಾ ಅವರು ಉತ್ತರಿಸಿ ಮಾತನಾಡಿದರು.

ಸಹಕಾರಿ ಸಂಘಗಳಿಗೆ ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮವು ಅವಧಿ ಸಾಲಗಳು, ಹೂಡಿಕೆ ಸಾಲಗಳು ಮತ್ತು ಸಬ್ಸಿಡಿಗಳನ್ನು ನೀಡುವ ಮೂಲಕ ಪರಿವರ್ತಕ ಪಾತ್ರವನ್ನು ವಹಿಸುತ್ತಿದ್ದು, ಅವುಗಳ ಸುಸ್ಥಿರ ಅಭಿವೃದ್ಧಿ ಮತ್ತು ಬೆಳವಣಿಗೆಯನ್ನು ಸಕ್ರಿಯಗೊಳಿಸುತ್ತದೆ. ಎನ್‌ಸಿಡಿಸಿಯ ಸ್ವಂತ ನಿಧಿಯಿಂದ ಸಾಲಗಳನ್ನು ಒದಗಿಸಿದರೆ, ಕೇಂದ್ರ ವಲಯದ ಯೋಜನೆಗಳೊಂದಿಗೆ ಸಂಯೋಜಿಸುವ ಮೂಲಕ ಸಬ್ಸಿಡಿಗಳನ್ನು ವಿಸ್ತರಿಸಲಾಗುತ್ತದೆ, ಸಹಕಾರಿ ಸಂಸ್ಥೆಗಳು ಸಮಗ್ರ ಆರ್ಥಿಕ ಬೆಂಬಲದಿಂದ ಪ್ರಯೋಜನ ಪಡೆಯುತ್ತವೆ ಎಂದು ಅವರು ಹೇಳಿದರು.

ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮದ ಸಹಾಯವು ಮಾರುಕಟ್ಟೆ, ಸಂಸ್ಕರಣೆ, ಸಂಗ್ರಹಣೆ, ಶೀತಲ ಸರಪಳಿ ಅಭಿವೃದ್ಧಿ, ಕೈಗಾರಿಕಾ ಉದ್ಯಮಗಳು ಮತ್ತು ಅಗತ್ಯ ಗ್ರಾಹಕ ಸರಕುಗಳ ವಿತರಣೆಯನ್ನು ಒಳಗೊಂಡಿರುವ ವ್ಯಾಪಕ ಶ್ರೇಣಿಯ ಚಟುವಟಿಕೆಗಳನ್ನು ಒಳಗೊಂಡಿದೆ. ಇದು ಸಾಲ ಮತ್ತು ಸೇವಾ ಸಹಕಾರಿ ಸಂಘಗಳು, ಸಹಕಾರಿ ಬ್ಯಾಂಕಿಂಗ್ ಘಟಕಗಳು ಮತ್ತು ಕೃಷಿ ಸೇವೆಗಳನ್ನು ಬೆಂಬಲಿಸುತ್ತದೆ ಎಂದರು. ತನ್ನ ಕೇಂದ್ರೀಕೃತ ಯೋಜನೆಗಳ ಮೂಲಕ, ವಿವಿಧ ಕ್ಷೇತ್ರಗಳಲ್ಲಿ ಸಹಕಾರಿಗಳ ಪ್ರಭಾವವನ್ನು ಹೆಚ್ಚಿಸಲು ರಾಷ್ಟ್ರೀಯ ಅಭಿವೃದ್ಧಿ ನಿಗಮವು ಮಹತ್ವದ ಕ್ರಮಗಳನ್ನು ತೆಗೆದುಕೊಂಡಿದೆ. ಯುವ ಸಹಕಾರವು ಹೊಸ ಆಲೋಚನೆಗಳೊಂದಿಗೆ ಹೊಸದಾಗಿ ರೂಪುಗೊಂಡ ಸಹಕಾರಿಗಳಲ್ಲಿ ಉದ್ಯಮ ಮತ್ತು ನಾವೀನ್ಯತೆಯನ್ನು ಉತ್ತೇಜಿಸುತ್ತದೆ. ಆಯುಷ್ಮಾನ್ ಸಹಕಾರ ಆಸ್ಪತ್ರೆಗಳು, ವೈದ್ಯಕೀಯ ಶಿಕ್ಷಣ, ಶುಶ್ರೂಷೆ, ಅರೆವೈದ್ಯಕೀಯ ಶಿಕ್ಷಣ, ಸಮಗ್ರ ಆರೋಗ್ಯ ವ್ಯವಸ್ಥೆಗಳು ಮತ್ತು ಆರೋಗ್ಯ ವಿಮೆಗೆ ಸಹಾಯವನ್ನು ಒದಗಿಸುವ ಆರೋಗ್ಯ ಕ್ಷೇತ್ರವನ್ನು ಸಮಗ್ರವಾಗಿ ತಿಳಿಸುತ್ತದೆ ಎಂದು ಅವರು ಉತ್ತರಿಸಿದರು.

ಹಾಲು ಉತ್ಪಾದಕರ ಸಹಕಾರ ಸಂಘಗಳು ಉದ್ಯಮಶೀಲತೆಯ ಉಪಕ್ರಮಗಳನ್ನು ಬೆಂಬಲಿಸುವುದು ಸೇರಿದಂತೆ ಮಹಿಳೆಯರನ್ನು ಸಬಲೀಕರಣಗೊಳಿಸುವ ಗುರಿಯನ್ನು ಹೊಂದಿವೆ. ಸಹಕಾರಿ ಡೈರಿ ವ್ಯವಹಾರಗಳಿಗೆ ಮೂಲಸೌಕರ್ಯ ಸೃಷ್ಟಿ ಮತ್ತು ಆಧುನೀಕರಣವನ್ನು ಸುಗಮಗೊಳಿಸುವ ಮೂಲಕ ESG – ಸಂಯೋಜಿತ ಚಟುವಟಿಕೆಗಳ ಮೇಲೆ ಕೇಂದ್ರೀಕರಿಸುತ್ತದೆ. ಡಿಜಿಟಲ್ ಸಹಕಾರ, ಡಿಜಿಟಲ್ ಇಂಡಿಯಾ



ಉಪಕ್ರಮದೊಂದಿಗೆ ಹೊಂದಿಕೊಂಡಿದೆ, ಹಣಕಾಸಿನ ನೆರವು ಮತ್ತು ಸರ್ಕಾರದ ಪ್ರೋತ್ಸಾಹದ ಮೂಲಕ ಡಿಜಿಟಲ್ ರೂಪಾಂತರವನ್ನು ಅಳವಡಿಸಿಕೊಳ್ಳಲು ಸಹಕಾರಿಗಳಿಗೆ ಅಧಿಕಾರ ನೀಡುತ್ತದೆ ಎಂದರು.

ಸ್ವಯಂ ಶಕ್ತಿ ಸಹಕಾರ ಯೋಜನೆಯು ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಆರ್ಥಿಕ ನೆರವು ನೀಡುವಲ್ಲಿ ಕೃಷಿ ಸಾಲ ಸಹಕಾರ ಸಂಘಗಳನ್ನು ಬೆಂಬಲಿಸುತ್ತದೆ, ಆದರೆ ದೀರ್ಘಾವಧಿ ಕೃಷಿಕ ಪುಂಜಿ ಸಹಕಾರ ಯೋಜನೆಯು ಕೃಷಿ ಸಹಕಾರಿ ಸಂಘಗಳಿಗೆ ಅವರ ಸಾಲ ನೀಡುವ ಚಟುವಟಿಕೆಗಳಿಗೆ ದೀರ್ಘಾವಧಿಯ ಹಣಕಾಸಿನ ನೆರವು ನೀಡುತ್ತದೆ. ತನ್ನ ಸ್ವಂತ ಉಪಕ್ರಮಗಳ ಜೊತೆಗೆ, ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮವು ತನ್ನ ವ್ಯಾಪ್ತಿಯನ್ನು ಮತ್ತು ಪ್ರಭಾವವನ್ನು ವಿಸ್ತರಿಸಲು ಸಹಕಾರ ಸಚಿವಾಲಯ ಮತ್ತು ಇತರ ಸರ್ಕಾರಿ ಸಚಿವಾಲಯಗಳ ವಿವಿಧ ಯೋಜನೆಗಳನ್ನು ಜಾರಿಗೊಳಿಸುತ್ತದೆ. ಇವುಗಳಲ್ಲಿ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಬಲಪಡಿಸಲು ಅನುದಾನವನ್ನು ಒದಗಿಸುವುದು, ಕೃಷಿ ಮಾರುಕಟ್ಟೆ ಮೂಲಸೌಕರ್ಯವನ್ನು ಬೆಂಬಲಿಸುವುದು ಮತ್ತು ತೋಟಗಾರಿಕೆಯ ಸಮಗ್ರ ಅಭಿವೃದ್ಧಿ ಮಿಷನ್ ಅಡಿಯಲ್ಲಿ ಸಮಗ್ರ ಸುಗ್ಗಿಯ ನಂತರದ ನಿರ್ವಹಣೆಯನ್ನು ಉತ್ತೇಜಿಸುವುದು ಸೇರಿವೆ.

ಹಣಕಾಸಿನ ನೆರವನ್ನು ಖಾತ್ರಿಪಡಿಸುವ ಮೂಲಕ ಸರ್ಕಾರದ ಆದ್ಯತೆಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವ ಮೂಲಕ, ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ ನಿಯಮಿತ ಭಾರತದಲ್ಲಿ ಸಹಕಾರಿ ಚಳವಳಿಯ ಪ್ರಮುಖ ಆಧಾರಸ್ತಂಭವಾಗಿ ಗುರುತಿಸಿಕೊಂಡಿದೆ. ಕೃಷಿ, ಆರೋಗ್ಯ, ಹೈನುಗಾರಿಕೆ, ಮತ್ತು ಡಿಜಿಟಲೀಕರಣದಂತಹ ವೈವಿಧ್ಯಮಯ ವಲಯಗಳಲ್ಲಿ ಸಹಕಾರಿಗಳನ್ನು ಸಬಲೀಕರಣಗೊಳಿಸುವ ಅದರ ಬದ್ಧತೆಯು ಅಂತರ್ಗತ ಮತ್ತು ಸುಸ್ಥಿರ ಅಭಿವೃದ್ಧಿಗಾಗಿ ಅದರ ದೃಷ್ಟಿಯನ್ನು ಪ್ರತಿಬಿಂಬಿಸಲು ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮವು ನಿರ್ಣಾಯಕ ಪಾತ್ರವನ್ನು ವಹಿಸುತ್ತಿದೆ ಎಂದು ಸಚಿವ ಅಮಿತ್ ಶಾ ಅವರು ತಿಳಿಸಿದ್ದಾರೆ.

## ಫೆಬ್ರವರಿ 1ರಂದು 2025–26ನೇ ಸಾಲಿನ ಬಜೆಟ್ ಮಂಡನೆ

# ಮಧ್ಯಮ ವರ್ಗಕ್ಕೆ ಬಜೆಟ್‌ನಲ್ಲಿ ಆದಾಯ ತೆರಿಗೆ ಇಳಿಕೆ ಸಾಧ್ಯತೆ ?




**ಹೊಸದಿಲ್ಲಿ:** ಮಧ್ಯಮ ವರ್ಗದವರಿಗೆ ತೆರಿಗೆ ಹೊರೆಯನ್ನು ತಪ್ಪಿಸುವ ಮತ್ತು ಮಂದಗತಿಯ ಆರ್ಥಿಕತೆಗೆ ವೇಗ ನೀಡುವ ನಿಟ್ಟಿನಲ್ಲಿ ವಿತ್ತ ಸಚಿವಾಲಯವು ಈ ಬಾರಿ ಬಜೆಟ್‌ನಲ್ಲಿ ತೆರಿಗೆ ರಿಲೀಫ್‌ಪ್ರಕಟಿಸುವ ಸಾಧ್ಯತೆಯಿದೆ.

ವಾರ್ಷಿಕ 15 ಲಕ್ಷ ರೂ.ವರೆಗೆ ವರಮಾನ ಹೊಂದಿರುವವರಿಗೆ ತೆರಿಗೆ ಹೊರೆಯನ್ನು ಕಡಿಮೆ ಮಾಡುವ ಸಾಧ್ಯತೆಯಿದೆ. ತೆರಿಗೆ ವಿನಾಯಿತಿ ಮಿತಿ ಹೆಚ್ಚಳ ಅಥವಾ ತೆರಿಗೆ ದರಗಳ ಕಡಿತದ ಮೂಲಕ ಈ ಅನುಕೂಲ ಒದಗಿಸುವ ಸಂಭವವಿದೆ. ಆದರೆ "ಕಡಿತದ ಪ್ರಮಾಣ ಎಷ್ಟೆಂಬುದು ಇನ್ನೂ ನಿರ್ಧಾರವಾಗಿಲ್ಲ. ಫೆಬ್ರವರಿ 1ರಂದು 2025–26ನೇ ಸಾಲಿನ ಬಜೆಟ್ ಮಂಡನೆಯಾಗಲಿದ್ದು, ಅಷ್ಟರ ಒಳಗಾಗಿ ನಿರ್ಧಾರ ತೆಗೆದುಕೊಳ್ಳುವ ಸಾಧ್ಯತೆ ಇದೆ. ಇದರಿಂದ ಬೊಕ್ಕಸಕ್ಕೆ ಎಷ್ಟು ನಷ್ಟವಾಗಲಿದೆ ಎಂಬುದನ್ನು ಈವರೆಗೂ ಅಂದಾಜಿಸಿಲ್ಲ," ಎಂದು ಮೂಲಗಳು ತಿಳಿಸಿವೆ.

ಈ ಕ್ರಮ ಕೈಗೊಂಡಲ್ಲಿ ನಗರ ಪ್ರದೇಶದ ದುಬಾರಿ ಜೀವನ ವೆಚ್ಚದಿಂದ ತತ್ತರಿಸಿರುವ ಕೋಟ್ಯಂತರ ಸಂಬಳದಾರರಿಗೆ ಪ್ರಯೋಜನವಾಗಲಿದೆ.

### ಆರ್ಥಿಕತೆ ಮಂದಗತಿ

ದಾಖಲೆ ಮಟ್ಟಕ್ಕೆ ಜಿಗಿದ ಹಣದುಬ್ಬರ, ಬೇಡಿಕೆ ಕುಸಿತ, ಕೈಗಾರಿಕಾ ಉತ್ಪಾದನಾ ಕುಸಿತದಿಂದ ಆರ್ಥಿಕತೆ ಪ್ರಗತಿ ಮಂದವಾಗಿದೆ. ಇತ್ತೀಚೆಗೆ ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕ್2024–25ನೇ ಸಾಲಿನ ಭಾರತದ ಜಿಡಿಪಿ ಅಂದಾಜು ಬೆಳವಣಿಗೆ ದರವನ್ನು ಶೇ. 7ರಿಂದ ಶೇ. 6.5ಕ್ಕೆ ಇಳಿಸಿದೆ. ರಿಸರ್ವ್ ಬ್ಯಾಂಕ್ ಸಹ ಅಂದಾಜು ಆರ್ಥಿಕ ಪ್ರಗತಿ ದರವನ್ನು ಶೇ. 7.2ರಿಂದ ಶೇ. 6.6ಕ್ಕೆ ಇಳಿಸಿದೆ. ಈ ಹಿನ್ನೆಲೆಯಲ್ಲಿ, ಜನರ ಕೈಯಲ್ಲಿ ಹೆಚ್ಚಿನ ಹಣ ಉಳಿಸುವ ಮೂಲ ಬೇಡಿಕೆಗೆ ಉತ್ತೇಜನ ನೀಡಲು ಸರಕಾರ ಕ್ರಮ ಕೈಗೊಳ್ಳುವ ಸಾಧ್ಯತೆಯಿದೆ ಎಂದು ತಜ್ಞರು ಹೇಳಿದ್ದಾರೆ.

### ಪ್ರಧಾನಿಗೆ ಅರ್ಥಶಾಸ್ತ್ರಜ್ಞರ ಸಲಹೆ

ಪ್ರಧಾನಿ ನರೇಂದ್ರ ಮೋದಿ ಅವರು ಕಳೆದವಾರ ಪ್ರಮುಖ ಅರ್ಥಶಾಸ್ತ್ರಜ್ಞರ ಜತೆ ಬಜೆಟ್ ಪೂರ್ವ ಸಭೆ ನಡೆಸಿದ್ದು, ಈ ವೇಳೆ ಆರ್ಥಿಕ ತಜ್ಞರು ಸಹ ತೆರಿಗೆ ಹೊರೆ ಇಳಿಸುವ ಮೂಲಕ ಜನರ ಜೀವನ ಸುಗಮಗೊಳಿಸಬೇಕೆಂದು ಸಲಹೆ ನೀಡಿದ್ದಾರೆ ಎಂದು ತಿಳಿದುಬಂದಿವೆ.

### ಶೀಘ್ರದಲ್ಲೇ ಸಮಿತಿ ವರದಿ

ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಆದಾಯ ತೆರಿಗೆ ಕಾಯಿದೆಯ ಸಮಗ್ರ ಮರುಪರಿಶೀಲನೆ ಮಾಡುವುದಾಗಿ ಕಳೆದ ಜುಲೈನಲ್ಲಿ ಮಂಡಿಸಿದ 2024–25ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿದ್ದರು. ಇದರ ಭಾಗವಾಗಿ, ಆದಾಯ ತೆರಿಗೆ ಮುಖ್ಯ ಆಯುಕ್ತ ವಿ.ಕೆ. ಗುಪ್ತಾ ನೇತೃತ್ವದಲ್ಲಿ ಪರಿಶೀಲನಾ ಸಮಿತಿಯನ್ನು ರಚನೆ ಮಾಡಿದ್ದರು. ಈ ಸಮಿತಿಯು ಫೆಬ್ರವರಿಯಲ್ಲಿ ಬಜೆಟ್ ಮಂಡನೆಗೆ ಮುನ್ನ ತನ್ನ ಶಿಫಾರಸು ವರದಿಯನ್ನು ಸರಕಾರಕ್ಕೆ ಸಲ್ಲಿಸುವ ಸಾಧ್ಯತೆಯಿದೆ. ಸಮಿತಿಯು ತೆರಿಗೆ ಪದ್ಧತಿಯನ್ನು ಮತ್ತಷ್ಟು ಸರಳೀಕರಿಸುವ ಬಗ್ಗೆ ಸಲಹೆ–ಸೂಚನೆಗಳನ್ನು ನೀಡುವ ಸಾಧ್ಯತೆಯಿದೆ.

## ಸಹಕಾರ ಸಂಘಗಳ ಚುನಾವಣೆ ನಡೆಸುವ ಅಧಿಕಾರಿಗಳಿಗೆ ಸೂಕ್ತ ಸಂಭಾವನೆ ನೀಡುವ ಬಗ್ಗೆ

### ಕರ್ನಾಟಕ ಸರ್ಕಾರ
### ಸಹಕಾರ ಚುನಾವಣಾ ಪ್ರಾಧಿಕಾರ

**ಟಿ.ಟಿ.ಎಂ.ಸಿ. ಕಟ್ಟಡ, 3ನೇ ಮಹಡಿ, "ಎ" ಬ್ಲಾಕ್, ಶ್ರೀ ಕೆಂಗಲ್ ಹನುಮಂತಯ್ಯ ರಸ್ತೆ, ಶಾಂತಿನಗರ, ಬೆಂಗಳೂರು–560027.**
Email: coea-coop@karnataka.gov.in Website: coea.karnataka.gov.in Ph: 080-2220066/29709014

ಸಂಖ್ಯೆ: ಸಚುಪ್ರಾ/ಆಡಳಿತ/ಚು.ಸಂ./29/2021–22 ದಿನಾಂಕ: 18.12.2021

ವಿಷಯ : ಸಹಕಾರ ಸಂಘಗಳ/ ಸೌಹಾರ್ದ ಸಹಕಾರಿಗಳ ಆಡಳಿತ ಮಂಡಲಿಗಳಿಗೆ / ಪದಾಧಿಕಾರಿಗಳ ಆಯ್ಕೆಗಳಿಗಾಗಿ ನಡೆಯುವ ಚುನಾವಣೆಗಳಲ್ಲಿ ರಿಟರ್ನಿಂಗ್ ಅಧಿಕಾರಿ, ಮತಗಟ್ಟೆ ಅಧಿಕಾರಿಗಳು, ಪರಿಶೀಲನಾಧಿಕಾರಿಗಳು ಮತ್ತು ಇತರೆ ಚುನಾವಣಾ ಸಿಬ್ಬಂದಿಗಳಿಗೆ ನೀಡುವ ಸಂಭಾವನೆಯನ್ನು ಪರಿಷ್ಕರಿಸುವ ಬಗ್ಗೆ.

ಉಲ್ಲೇಖ :
1) ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಆರ್.ಎಸ್.ಆರ್/ಚು.ಸಂಭಾವನೆ/187/2009–10 ದಿನಾಂಕ 20.01.2010.
2) ಈ ಕಛೇರಿಯ ಆದೇಶ ಸಂಖ್ಯೆ: ಸಚುಆ/ಚುನಾವಣೆ ಸಂಭಾವನೆ/11/2013–14 ದಿನಾಂಕ 25.07.2013.
3) ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ/56/ಇಯುಬಿ/ 2018 ಬೆಂಗಳೂರು, ದಿನಾಂಕ 06.08.2018.

### ಪ್ರಸ್ತಾವನೆ:

ಸಹಕಾರ ಸಂಘಗಳಿಗೆ / ಸೌಹಾರ್ದ ಸಹಕಾರಿಗಳ ಆಡಳಿತ ಮಂಡಲಿಗಳಿಗೆ ನಡೆಯುವ ಚುನಾವಣೆ ಮತ್ತು ಪದಾಧಿಕಾರಿಗಳ ಆಯ್ಕೆಗಳಿಗಾಗಿ ನಡೆಯುವ ಚುನಾವಣೆಗಳಿಗೆ ಸಂಬಂಧಿಸಿದಂತೆ ಸದರಿ ಚುನಾವಣೆಗಳಲ್ಲಿ ರಿಟರ್ನಿಂಗ್ ಅಧಿಕಾರಿ / ಸಹಾಯಕ ರಿಟರ್ನಿಂಗ್ ಅಧಿಕಾರಿ ಹಾಗೂ ಮತಗಟ್ಟೆ ಸಿಬ್ಬಂದಿಯಾಗಿ ಕರ್ತವ್ಯ ನಿರ್ವಹಿಸುವ ಅಧಿಕಾರಿ / ನೌಕರರಿಗೆ ಉಲ್ಲೇಖ(1)ರಂತೆ ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರು ಪಾವತಿಸಬೇಕಾದ ಸಂಭಾವನೆ, ಪ್ರವಾಸ ಭತ್ಯೆ ಹಾಗೂ ದಿನಭತ್ಯೆ ಕುರಿತಂತೆ ಸುತ್ತೋಲೆಯನ್ನು ಹೊರಡಿಸಿದ್ದು ಸರಿಯಷ್ಟೆ.

ನಂತರ, ದಿನಾಂಕ 18.03.2013 ರಲ್ಲಿ ಕರ್ನಾಟಕ ರಾಜ್ಯ ಸಹಕಾರ ಚುನಾವಣಾ ಆಯೋಗವು ಅಸ್ತಿತ್ವಕ್ಕೆ ಬಂದಿದ್ದು, ಉಲ್ಲೇಖ(2)ರಲ್ಲಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ಕ್ಕೆ 2012ರಲ್ಲಿ ಮಾಡಲಾದ ತಿದ್ದುಪಡಿಯನ್ವಯ ಪ್ರಕರಣ 39ಎ ರೀತ್ಯಾ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 26ರ ರೀತ್ಯಾ ಸಹಕಾರ ಸಂಘಗಳಿಗೆ / ಸೌಹಾರ್ದ ಸಹಕಾರಿಗಳಿಗೆ ನಡೆಯುವ ಆಡಳಿತ ಮಂಡಲಿ ಚುನಾವಣೆ ಹಾಗೂ ಪದಾಧಿಕಾರಿಗಳ ಚುನಾವಣೆಯನ್ನು ಸಹಕಾರ ಚುನಾವಣಾ ಆಯೋಗದ ಅಧೀಕ್ಷಣೆ, ನಿಯಂತ್ರಣ ಹಾಗೂ ನಿರ್ದೇಶನದನ್ವಯ ನಡೆಸುವುದರಿಂದ ಮತದಾರರ ಪಟ್ಟಿ ಸಿದ್ಧಪಡಿಸುವಿಕೆ, ಪ್ರವಾಸ ಮತ್ತು ಇತರೆ ಭತ್ಯೆಗಳು, ರಿಟರ್ನಿಂಗ್ ಅಧಿಕಾರಿ, ಸಹಾಯಕ ರಿಟರ್ನಿಂಗ್ ಅಧಿಕಾರಿ, ಅಧ್ಯಕ್ಷಾಧಿಕಾರಿ ಮತ್ತು ಇನ್ನಿತರ ಮತಗಟ್ಟೆ ಸಿಬ್ಬಂದಿಗೆ ಪಾವತಿಸಬೇಕಾದ ಸಂಭಾವನೆಯನ್ನು ಸಹಕಾರ ಚುನಾವಣಾ ಆಯೋಗವು ಗೊತ್ತುಪಡಿಸಿ ದಿನಾಂಕ 25.07.2013ರಲ್ಲಿ ಆದೇಶವನ್ನು ಹೊರಡಿಸಿರುತ್ತದೆ. ಕೇಂದ್ರ ಚುನಾವಣಾ ಆಯೋಗವು 2018ರ ವಿಧಾನಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಚುನಾವಣಾ ಕರ್ತವ್ಯ ನಿರ್ವಹಿಸುವ ಅಧಿಕಾರಿ/ಸಿಬ್ಬಂದಿಗಳಿಗೆ ನೀಡುವ ಸಂಭಾವನೆಯನ್ನು ಪರಿಷ್ಕರಿಸಿರುವ ಹಿನ್ನೆಲೆಯಲ್ಲಿ ಉಲ್ಲೇಖ(3)ರಲ್ಲಿ ಕರ್ನಾಟಕ ರಾಜ್ಯ ಚುನಾವಣಾ ಆಯೋಗವು ರಾಜ್ಯದಲ್ಲಿ ಜರುಗಲಿರುವ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಚುನಾವಣಾ ಕರ್ತವ್ಯಕ್ಕೆ ನೇಮಿಸಲ್ಪಡುವ ವಿವಿಧ ಹಂತಗಳ ಅಧಿಕಾರಿ/ಸಿಬ್ಬಂದಿಗಳಿಗೆ ನೀಡುವ ಸಂಭಾವನೆಯನ್ನು ಪರಿಷ್ಕರಿಸಿ ಆದೇಶಿಸಲಾಗಿರುತ್ತದೆ.

ಅದರಂತೆ, ಪ್ರಾಧಿಕಾರದಿಂದ ಉಲ್ಲೇಖ(2)ರ ಚುನಾವಣಾ ಸಂಭಾವನೆಯ ಆದೇಶವನ್ನು ಹೊರಡಿಸಿ ಈಗಾಗಲೇ 8 ವರ್ಷಗಳು ಗತಿಸಿರುವುದರಿಂದ, ಇತ್ತೀಚಿನ ಜೀವನಾವಶ್ಯಕ ಅಗತ್ಯ ವಸ್ತುಗಳು / ಗ್ರಾಹಕ ವಸ್ತುಗಳು / ಪ್ರಯಾಣದರ ಏರಿಕೆಯನ್ನು ಗಮನದಲ್ಲಿಟ್ಟುಕೊಂಡು ರಿಟರ್ನಿಂಗ್ ಅಧಿಕಾರಿ / ಸಹಾಯಕ ರಿಟರ್ನಿಂಗ್ ಅಧಿಕಾರಿ / ಮತಗಟ್ಟೆ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಈ ಕಛೇರಿಯ ಆದೇಶದಂತೆ ನೀಡುತ್ತಿರುವ ಸಂಭಾವನೆಯನ್ನು ಪರಿಷ್ಕರಿಸುವ ಅವಶ್ಯಕತೆ ಇದೆ ಎಂಬುದನ್ನು ಮನಗಂಡು, ಸಂಭಾವನೆಯನ್ನು ಪರಿಷ್ಕರಿಸುವ ಕುರಿತು ಈ ಕೆಳಕಂಡಂತೆ ಆದೇಶಿಸಲಾಗಿದೆ.

### ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ಹಾಗೂ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 39ಬಿ ಹಾಗೂ ಕರ್ನಾಟಕ ಸಹಕಾರ ಸಂಘಗಳ ನಿಯಮಗಳು, 1960ರ ನಿಯಮ 14ಎಎ ರೀತ್ಯಾ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಡಾ: ಎನ್.ಎಸ್. ಚನ್ನಪ್ಪಗೌಡ, ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ಆದ ನಾನು, ಸಹಕಾರ ಸಂಘಗಳ/ಸೌಹಾರ್ದ ಸಹಕಾರಿಗಳ ಆಡಳಿತ ಮಂಡಳಿ / ಪದಾಧಿಕಾರಿಗಳ ಚುನಾವಣೆಗಳ ಸಂಬಂಧ ನೇಮಕವಾಗುವ ರಿಟರ್ನಿಂಗ್ ಅಧಿಕಾರಿ / ಸಹಾಯಕ ರಿಟರ್ನಿಂಗ್ ಅಧಿಕಾರಿ, ಮತಗಟ್ಟೆ ಅಧಿಕಾರಿ / ಸಿಬ್ಬಂದಿಗಳಿಗೆ / ಪರಿಶೀಲನಾಧಿಕಾರಿಗೆ ನೀಡಬೇಕಾದ ಸಂಭಾವನೆಯನ್ನು ಈ ಕೆಳಗಿನಂತೆ ಪರಿಷ್ಕರಿಸಿ ಆದೇಶಿಸಿರುತ್ತೇನೆ. ಈ ಆದೇಶವು ಕೂಡಲೇ ಜಾರಿಗೆ ಬಂದಿದ್ದು, ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತದೆ.

**(ಅ). ಆಡಳಿತ ಮಂಡಲಿ ಸಾಮಾನ್ಯ ಚುನಾವಣೆ ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಯ ಪರಿಷ್ಕೃತ ಚುನಾವಣಾ ಸಂಭಾವನೆ.**

| (ರೂ.ಗಳಲ್ಲಿ) | | | | | | | |
|---|---|---|---|---|---|---|---|
| ಕ್ರ.ಸಂ. | ವರ್ಗ | ಸಂಘದಲ್ಲಿನ ಅರ್ಹ ಬಿಡಿ ಸದಸ್ಯರ ಸಂಖ್ಯೆ | ರಿಟರ್ನಿಂಗ್ ಅಧಿಕಾರಿ | ಸಹಾಯಕ ರಿಟರ್ನಿಂಗ್ ಅಧಿಕಾರಿ | ಅಧ್ಯಕ್ಷಾಧಿಕಾರಿ | ಮತಗಟ್ಟೆ ಅಧಿಕಾರಿ/ ಸಿಬ್ಬಂದಿ | ಸಹಾಯಕ 'ಡಿ' ಗ್ರೂಪ್ |
| 1 | 2 | 3 | 4 | 5 | 6 | 7 | 8 |
| 1 | ಪ್ರಾಥಮಿಕ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | 1000ಕ್ಕಿಂತ ಕಡಿಮೆ | 1500 | 900 | 850 | 750 | 500 |
| | | 1000 ರಿಂದ 2500 ರವರೆಗೆ | 2000 | 1000 | 850 | 750 | 500 |
| | | 2500 ರಿಂದ 5000 ರವರೆಗೆ | 2500 | 1500 | 850 | 750 | 500 |
| | | 5000 ಹಾಗೂ ಮೇಲ್ಪಟ್ಟು | 3000 | 2000 | 850 | 750 | 600 |
| 2 | ಮಾಧ್ಯಮಿಕ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | 3000 ಕ್ಕಿಂತ ಕಡಿಮೆ | 3500 | 2500 | 1500 | 1000 | 750 |
| | | 3000ಕ್ಕೆ ಮೇಲ್ಪಟ್ಟು | 4000 | 3000 | 1500 | 1000 | 750 |
| 3 | ಫೆಡರಲ್ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | – | 4500 | 3000 | 2000 | 1500 | 750 |
| 4 | ಅಪೆಕ್ಸ್ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | – | 5000 | 5000 | 2000 | 1500 | 750 |

ಮೇಲ್ಕಂಡ ಕೋಷ್ಟಕದಲ್ಲಿ ನಮೂದಿಸಿರುವ ಸಂಭಾವನೆಯು ಒಂದು ಸಹಕಾರ ಸಂಘ/ ಸೌಹಾರ್ದ ಸಹಕಾರಿಯ ಪೂರ್ಣ ಚುನಾವಣೆ ಪ್ರಕ್ರಿಯೆಯನ್ನು ಕೈಗೊಳ್ಳಲು ನಿಗದಿಪಡಿಸಿರುವ ಒಟ್ಟು (ಇಡಿಗಂಟು) ಮೊತ್ತವಾಗಿರುತ್ತದೆ.

**(ಆ) ಮುಂದುವರೆದು, ಚುನಾವಣೆ ಪ್ರಕ್ರಿಯೆಯಲ್ಲಿ ಮತದಾನದ ನಂತರ ನಡೆಯುವ ಮತ ಎಣಿಕೆ ಕಾರ್ಯಕ್ಕೆ ನಿಯೋಜಿಸಲ್ಪಡುವ ಚುನಾವಣಾ ಸಿಬ್ಬಂದಿಗಳು ಹಾಗೂ ರಿಟರ್ನಿಂಗ್ ಅಧಿಕಾರಿ/ ಸಹಾಯಕ ರಿಟರ್ನಿಂಗ್ ಅಧಿಕಾರಿ ಈ ಕೆಳಕಂಡಂತೆ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.**

| (ರೂ.ಗಳಲ್ಲಿ) | | | | | |
|---|---|---|---|---|---|
| ಕ್ರಮ ಸಂಖ್ಯೆ | ವರ್ಗ | ರಿಟರ್ನಿಂಗ್ ಅಧಿಕಾರಿ | ಸಹಾಯಕ ರಿಟರ್ನಿಂಗ್ ಅಧಿಕಾರಿ | ಮತ ಎಣಿಕೆ ಅಧಿಕಾರಿ/ ಸಿಬ್ಬಂದಿ | ಸಹಾಯಕ 'ಡಿ' ಗ್ರೂಪ್ |
| **1** | **2** | **3** | **4** | **5** | **6** |
| **1** | **ಪ್ರಾಥಮಿಕ/ಮಾಧ್ಯಮಿಕ/ ಫೆಡರಲ್/ ಅಪೆಕ್ಸ್ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು** | **1000** | **600** | **500** | **300** |

1) ಅಲ್ಲದೆ ರಿಟರ್ನಿಂಗ್ ಅಧಿಕಾರಿ/ ಸಹಾಯಕ ರಿಟರ್ನಿಂಗ್ ಅಧಿಕಾರಿ ಹಾಗೂ ಇತರೆ ಚುನಾವಣಾ ಕಾರ್ಯನಿರತ ಸಿಂದಿಗಳು ಕೆ.ಸಿ.ಎಸ್.ಆರ್. ರೀತ್ಯಾ ಪ್ರವಾಸಭತ್ಯೆ ಮತ್ತು ದಿನಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.
2) ಆದರೆ ರಿಟರ್ನಿಂಗ್ ಅಧಿಕಾರಿ/ ಸಹಾಯಕ ರಿಟರ್ನಿಂಗ್ ಅಧಿಕಾರಿ ರವರುಗಳು ಚುನಾವಣಾ ವೇಳಾ ಪಟ್ಟಿಯ ನಿಗದಿಪಡಿಸಿರುವ ಕಾರ್ಯಗಳನ್ನು ಕೈಗೊಳ್ಳಲು ಮಾತ್ರ ಚುನಾವಣಾ ವೇಳಾ ಪಟ್ಟಿಯಲ್ಲಿನ ಅವಧಿಗೆ ಸೀಮಿತವಾಗಿ ಕೆ.ಸಿಎಸ್.ಆರ್. ರೀತ್ಯಾ ಪ್ರವಾಸ ಭತ್ಯೆ ಮತ್ತು ದಿನ ಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.
3) ಇತರೆ ಚುನಾವಣಾ ಕಾರ್ಯನಿರತ ಸಿಬ್ಬಂದಿಗಳು ಚುನಾವಣೆ ನಡೆಯುವ ದಿನಕ್ಕೆ ಮಾತ್ರ ಕೆ.ಸಿ.ಎಸ್.ಆರ್. ರೀತ್ಯಾ ಪ್ರವಾಸ ಭತ್ಯೆ ಮತ್ತು ದಿನಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.
4) ಚುನಾವಣಾ ಕೆಲಸ ನಿರ್ವಹಿಸುವ ಸಿಬ್ಬಂದಿಗೆ ಸಂಭಾವನೆ, ಪ್ರವಾಸ ಭತ್ಯೆ ಹಾಗೂ ದಿನಭತ್ಯೆಯನ್ನು ಸಂಬಂಧಿಸಿದ ಸಹಕಾರ ಸಂಘ/ ಸೌಹಾರ್ದ ಸಹಕಾರಿಯು ಭರಿಸತಕ್ಕದಾಗಿದೆ.
5) ಪರಿಷ್ಕರಿಸಿರುವ ದರದಂತೆ ಪಡೆಯುವ ಸಂಭಾವನೆ/ ಪ್ರವಾಸ ಭತ್ಯೆ/ ದಿನಭತ್ಯೆಯನ್ನು ಹೊರತುಪಡಿಸಿ ಇನ್ನಾವುದೇ ರೂಪದಲ್ಲಿ ಸಂಭಾವನೆಯನ್ನು ಸಹಕಾರ ಸಂಘ/ ಸೌಹಾರ್ದ ಸಹಕಾರಿಗಳಿಂದ ಪಡೆಯುವಂತಿಲ್ಲ.
6) ರಿಟರ್ನಿಂಗ್ ಅಧಿಕಾರಿರವರು ಮತದಾನದ ಹಕ್ಕನ್ನು ಹೊಂದಿರುವ ಸುಮಾರು 500 ಅರ್ಹ ಸದಸ್ಯರಿಗೆ ಅನ್ವಯವಾಗುವಂತೆ ಒಂದು ಮತಗಟ್ಟೆರಂತೆ ಮತಗಟ್ಟೆಗಳನ್ನು ಸಿದ್ಧಪಡಿಸುವುದು.

**(ಇ) ಆಕಸ್ಮಿಕವಾಗಿ ತೆರವಾಗುವ ಪದಾಧಿಕಾರಿಗಳ ಸ್ಥಾನಗಳಿಗೆ ನಡೆಯುವ ಪದಾಧಿಕಾರಿಗಳ ಚುನಾವಣೆಯ ಸಂಬಂಧ ರಿರ್ಟನಿಂಗ್ ಅಧಿಕಾರಿ ಈ ಕೆಳಕಂಡಂತೆ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.**

(ರೂ.ಗಳಲ್ಲಿ)

| **ಕ್ರಮ ಸಂಖ್ಯೆ** | **ವರ್ಗ** | **ಪದಾಧಿಕಾರಿಗಳ ಚುನಾವಣೆ ಸಂಬಂಧ ರಿಟರ್ನಿಂಗ್ ಅಧಿಕಾರಿಯ ಸಂಭಾವನೆ** |
|---|---|---|
| **1** | **2** | **3** |
| 1 | ಪ್ರಾಥಮಿಕ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | 1000 |
| 2 | ಮಾಧ್ಯಮಿಕ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | 1500 |
| 3 | ಫೆಡರಲ್ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | 2000 |
| 4 | ಅಪೆಕ್ಸ್ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | 2500 |

ಮೇಲ್ಕಂಡಂತೆ ರಿಟರ್ನಿಂಗ್ ಅಧಿಕಾರಿ/ ಸಹಾಯಕ ರಿಟರ್ನಿಂಗ್ ಅಧಿಕಾರಿ/ ಚುನಾವಣಾ ಕಾರ್ಯನಿರತ ಸಿಬ್ಬಂದಿಗಳಿಗೆ ನಿಗದಿಪಡಿಸಿರುವ ಸಂಭಾವನೆ / ಭತ್ಯೆಗಳನ್ನು ಹೊರೆತುಪಡಿಸಿ ಬೇರೆ ಯಾವುದೇ ರೀತಿಯಲ್ಲಿ ನಗದು ಮೊತ್ತವನ್ನು ಪಾವತಿಸಿದಲ್ಲಿ ಸದರಿ ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿಯನ್ನು ಜವಾಬ್ದಾರರನ್ನಾಗಿ ಮಾಡಲಾಗುವುದು. ರಿಟರ್ನಿಂಗ್ ಅಧಿಕಾರಿ/ ಸಹಾಯಕ ರಿಟರ್ನಿಂಗ್ ಅಧಿಕಾರಿರವರು ನಿಗದಿಪಡಿಸಿರುವ ಮೊತ್ತಕ್ಕಿಂತ ಹೆಚ್ಚುವರಿ ಕ್ಲೇಂ ಮಾಡಿದ್ದಲ್ಲಿ, ಸದರಿ ಮೊತ್ತವನ್ನು ಪಾವತಿಸಲು ಕ್ರಮ ಕೈಗೊಂಡಿರುವ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕ್ರಮವನ್ನು ಅನುಮೋದಿಸುವ ಆಡಳಿತ ಮಂಡಳಿಯು ಸಹ ನೇರವಾಗಿ ಹೊಣೆಗಾರರಾಗುತ್ತಾರೆ.

(ಈ) ಪ್ರಾಥಮಿಕ, ಮಾಧ್ಯಮಿಕ, ಫೆಡರಲ್ ಹಾಗೂ ಅಪೆಕ್ಸ್ ಸಹಕಾರ ಸಂಘ/ ಸೌಹಾರ್ದ ಸಹಕಾರಿಗಳ ಚುನಾವಣೆಗೆ ಸಂಬಂಧಿಸಿದಂತೆ **ಮತದಾರರ ಪಟ್ಟಿ / ಭರ್ತಿ ಮಾಡಿರುವ ಡೆಲಿಗೇಟ್ ನಮೂನೆಗಳ ಪರಿಶೀಲನೆಗೆ** ಪರಿಶೀಲನಾಧಿಕಾರಿಯಾಗಿ ನೇಮಕ ಮಾಡಲ್ಪಡುವ ಅಧಿಕಾರಿ/ ಸಿಬ್ಬಂದಿ ಈ ಕೆಳಕಂಡಂತೆ ಸಂಭಾವನೆಯನ್ನು ಒಟ್ಟು (ಇಡಿಗಂಟು) ಮೊತ್ತವಾಗಿ ಪಡೆಯಲು ಅರ್ಹರಿರುತ್ತಾರೆ.

(ರೂ.ಗಳಲ್ಲಿ)

| **ಕ್ರಮ ಸಂಖ್ಯೆ** | **ವರ್ಗ** | **ಸಂಘದ / ಸಹಕಾರಿಯ ಸದಸ್ಯರ ಸಂಖ್ಯೆ** | **ಸಂಭಾವನೆ** |
|---|---|---|---|
| 1 | ಪ್ರಾಥಮಿಕ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | 1000 ಕ್ಕಿಂತ ಕಡಿಮೆ | 1000 |
| | | 1000 ರಿಂದ 4000 ರವರೆಗೆ | 2500 |
| | | 4000 ಕ್ಕಿಂತ ಮೇಲ್ಪಟ್ಟು | 3000 |
| 2 | ಮಾಧ್ಯಮಿಕ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | | 3500 |
| 3 | ಫೆಡರಲ್ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | | 4000 |
| 4 | ಅಪೆಕ್ಸ್ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು | | 4500 |

ಪರಿಶೀಲನಾಧಿಕಾರಿಯ ಸಂಭಾವನೆಯನ್ನು ಹೊರತುಪಡಿಸಿ ಇನ್ನಿತರರಿಗೆ ಯಾವುದೇ ಸಂಭಾವನೆಯನ್ನು ನೀಡಲು ಅವಕಾಶವಿರುವುದಿಲ್ಲ ಒಂದು ಪಕ್ಷ ಚುನಾವಣಾಧಿಕಾರಿಗೆ ಒಂದಕ್ಕಿಂತ ಹೆಚ್ಚು ಪರಿಶೀಲನಾಧಿಕಾರಿಗಳನ್ನು ನೇಮಕ ಮಾಡುವ ಅಗತ್ಯತೆ ಇದ್ದಲ್ಲಿ ಸಹಕಾರ ಚುನಾವಣಾ ಪ್ರಾಧಿಕಾರದ ಪೂರ್ವಾನುಮತಿಯನ್ನು ಪಡೆದು ನೇಮಕ ಮಾಡುವುದು. ಸಹಕಾರ ಚುನಾವಣಾ ಪ್ರಾಧಿಕಾರದಿಂದ ಜರುಗಲಿರುವ ಸಹಕಾರ ಸಂಘಗಳ/ ಸೌಹಾರ್ದ ಸಹಕಾರಿಗಳ ಚುನಾವಣೆಗೆ ಸಂಬಂಧಪಟ್ಟಂತೆ ಸುತ್ತೋಲೆ ಸಂಖ್ಯೆ : ಸಚುಆ/ಚುನಾವಣೆ/8/2014 ದಿನಾಂಕ : 18.03.2014ರಲ್ಲಿ ಚುನಾವಣಾ ಕರ್ತವ್ಯಕ್ಕಾಗಿ ನಿಯೋಜಿಸುವ ಪೊಲೀಸ್ ಸಿಬ್ಬಂದಿ / ಅಧಿಕಾರಿಗಳಿಗೆ ಶುಲ್ಕವನ್ನು ಪಾವತಿಸುವ ಸಂಬಂಧ ಸರ್ಕಾರಿ ಅದೇಶ ಸಂಖ್ಯೆ: ಹೆಚ್.ಡಿ/136/ಇ.ಎಫ್.ಎಸ್/2010 ಬೆಂಗಳೂರು, ದಿನಾಂಕ 21.08.2012ರಲ್ಲಿ ಆದೇಶವನ್ನು ಹೊರಡಿಸಲಾಗಿರುತ್ತದೆ. ಮತ್ತು, ಸರ್ಕಾರದ ಆದೇಶ ಸಂಖ್ಯೆ : ಹೆಚ್.ಡಿ/210/ಎಸ್.ಎಸ್.ಟಿ/2016, ಬೆಂಗಳೂರು, ದಿನಾಂಕ 04.03.2014 ಗಳಲ್ಲಿ ತಿಳಿಸಲಾಗಿರುವಂತೆ ಸಹಕಾರ ಸಂಘಗಳ / ಸೌಹಾರ್ದ ಸಹಕಾರಿಗಳ ಚುನಾವಣಾ ಕರ್ತವ್ಯಕ್ಕಾಗಿ ನಿಯೋಜನೆಗೊಳ್ಳುವ ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಶುಲ್ಕವನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ. ಅದರಂತೆಯೇ ಚುನಾವಣಾ ಕರ್ತವ್ಯ ನಿರತ ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಶುಲ್ಕವನ್ನು ಪಾವತಿಸತಕ್ಕದ್ದು. ಮುಂದುವರೆದು, ಸಹಕಾರ ಚುನಾವಣಾ ಕೈಪಿಡಿ–2016ರಲ್ಲಿ ತಿಳಿಸಲಾಗಿರುವ ಲೇಖನ ಸಾಮಗ್ರಿ, ಅಂಚೆವೆಚ್ಚ, ಜೆರಾಕ್ಸ್, ಪ್ಯಾಕ್ಸ್, ಮತಪೆಟ್ಟಿಗೆ ಬಾಡಿಗೆ, ಅಳಿಸಲಾಗದ ಶಾಯಿ ಇನ್ನು ಮುಂತಾದ ಸಾಮಗ್ರಿಗಳನ್ನು ನಿಯಮನುಸಾರ ಖರೀದಿಸುವುದು ಮತ್ತು ಖರ್ಚು–ವೆಚ್ಚಗಳನ್ನು ಕರ್ನಾಟಕ ಸಹಕಾರ ಸಂಘಗಳ ನಿಯಮಗಳು, 1960ರ ನಿಯಮ–14ಎಎ ರೀತ್ಯಾ ಆಯಾಯ ಸಂಘಗಳೇ ಭರಿಸತಕ್ಕದ್ದಾಗಿದೆ.

ಈ ಆದೇಶದ ಮೂಲಕ ಪರಿಷ್ಕೃತಗೊಳಿಸಿರುವ ಚುನಾವಣಾ ಸಂಭಾವನೆ ದರವು ಈ ಕೂಡಲೇ ಜಾರಿಗೆ ಬರತಕ್ಕದ್ದು.

**ಸಹಿ/–**

**ಡಾ. ಎನ್.ಎಸ್. ಚನ್ನಪ್ಪಗೌಡ**

**ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು.**